# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 | ಸಂಚಿಕೆ – 117 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 17–11–2023 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 | Issue - 117 | Title- Code: KARKAN 28269 | Chitradurga | Date: 17-11-2023 Friday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ತೆಲಂಗಾಣದಲ್ಲ ಕಾಂಗ್ರೆಸ್ ಅಧಿಕಾರ ಹಿಡಿಯುವತ್ತ ದಿಟ್ಟ ಹೆಜ್ಜೆ: ಸುಧಾಕರ್ 2

ಸರ್ಕಾರಿ ಯೋಜನೆಗಳ ಅರಿವು ಪಡೆದು, ಸದುಪಯೋಗಪಡಿಸಿಕೊಳ್ಳಿ: ಅಜೀಮ್ 3

ಕುಡಿವ ನೀರು ಪೂರೈಕೆಗೆ ಆದ್ಯತೆ ನೀಡಬೇಕು: ಜಿಲ್ಲಾಧಿಕಾರಿ 4



ಸುದ್ದಿ, ಜಾಹಿರಾತಿಗೆ 9686622252


## ಕೋಟೆ ನಾಡಿನ ವಿವಿಧ ಮಠಗಳಿಗೆ

# ನೂತನ ಬಿಜೆಪಿ ರಾಜ್ಯಾಧ್ಯಕ್ಷ ವಿಜೇಯಂದ್ರ ಭೇಟಿ






» **ಚಿತ್ರದುರ್ಗ**

ಕಾಂತರಾಜ್ ಸಮಿತಿ ವರದಿ ಸಿದ್ದರಾಮಯ್ಯ ಅಧಿಕಾರದಲ್ಲಿದ್ದಾಗ ಬಂದ ವರದಿಯಾಗಿದೆ ಆದರೆ ಆಗ ಅವರು ಅದನ್ನು ಅನುಷ್ಠಾನ ಮಾಡಿಲ್ಲ ಇದು ಅರೆ ಬೆಂದ ವರದಿಯಾಗಿದ್ದು ಅವರೇ ಹೇಳಿ ಮಾಡಿಸಿದ ವರದಿಯಾಗಿದೆ ಎಂದು ಸಿದ್ದರಾಮಯ್ಯರವರ ವಿರುದ್ಧ ಬಿಜೆಪಿ ನೂತನ ರಾಜ್ಯಾಧ್ಯಕ್ಷರಾದ ಬಿ.ವೈ.ವಿಜಯೇಂದ್ರ ಕಿಡಿ ಕಾರಿದರು.

ನಿನ್ನೆ ದಿನ ಅಧಿಕೃತವಾಗಿ ಬಿಜೆಪಿ ಕಚೇರಿಯಲ್ಲಿ ರಾಜ್ಯಾಧ್ಯಕ್ಷರಾಗಿ ಜವಬ್ದಾರಿ ವಹಿಸಿಕೊಂಡ ಬಳಿಕಾ ಇಂದು ಚಿತ್ರದುರ್ಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದು, ಮಾಜಿ ಶಾಸಕ ಜಿ.ಹೆಚ್. ತಿಪ್ಪಾರೆಡ್ಡಿ ಅವರ ನಿವಾಸಕ್ಕೆ ಭೇಟಿ ನೀಡಿದ ಬಳಿಕಾ ಸುದ್ದಿಗಾರರೊಂದಿಗೆ ಮಾತನಾಡಿ ಕಾಂತರಾಜ್ ವರದಿಯನ್ನು ತಯಾರು ಮಾಡಲು ಕಾಂಗ್ರೆಸ್ ಸರ್ಕಾರದ ಸಿದ್ದರಾಮಯ್ಯ ಮುಖ್ಯಮಂತ್ರಿಗಳಾಗಿದ್ದಾಗ 150 ಕೋಟಿ ಹಣವನ್ನು ನೀಡಿದ್ದರು. ವರದಿಯನ್ನು ಅವರು ಮನಬಂದಂತೆ ತಯಾರು ಮಾಡಿ ಅರೆ ಬೆಂದ ವರದಿಯನ್ನು ತಯಾರು ಮಾಡಿದ್ದಾರೆ ಆಯೋಗದವರು ಎಷ್ಟೋ



ಮನೆಗಳಿಗೆ ಬೇಟಿಯನ್ನು ನೀಡಿದೆ ಎ.ಸಿ.ರೂಂನಲ್ಲಿ ಕುಳಿತು ವರದಿಯನ್ನು ತಯಾರು ಮಾಡಿದ್ದಾರೆ. ಈ ಸಮಯದಲ್ಲಿ ಸಿದ್ದರಾಮಯ್ಯನವರೇ ಮುಖ್ಯಮಂತ್ರಿಗಳಾಗಿದ್ದರೆ ಏಕೆ ಅನುಷ್ಠಾನ ಮಾಡಲಿಲ್ಲ ಎಂದು ಪ್ರಶ್ನಿಸಿದರು.

ಆ ಸಮಯದಲ್ಲಿ ಕಾಂಗ್ರೆಸ್ ಸರ್ಕಾರ ಇದ್ದಾಗ ಇದೇ ಸಿದ್ದರಾಮಯ್ಯ ಮುಖ್ಯಮಂತ್ರಿಗಳಾಗಿದ್ದಾಗ ವೀರಶೈವ ಲಿಂಗಾಯತ ಮಧ್ಯ ಬಿರುಕನ್ನು ತಂದು ಬೆಂಕಿಯನ್ನು ಹಚ್ಚುವ ಕೆಲಸವನ್ನು ಮಾಡಲಿಲ್ಲವೇ ಅದರಲ್ಲಿ ವಿಫಲರಾದರು, ಈಗ ಹೊಸ ರೂಪದಲ್ಲಿ ಸಮಾಜವನ್ನು ಒಡೆಯುವ ದುಸ್ಸಾಹಕ್ಕೆ ಕೈ ಹಾಕುತ್ತಿದ್ದಾರೆ. ಬರುವಂತ ದಿನಗಳಲ್ಲಿ ಎಲ್ಲದಕ್ಕೂ ಜನತೆ ಉತ್ತರವನ್ನು ನೀಡುತ್ತಾರೆ ಎಂದು ವಿಜಯೇಂದ್ರ ತಿಳಿಸಿದರು. .ರಾಜ್ಯದಲ್ಲಿ ಹೊಸ ಸರ್ಕಾರ ಬಂದಿದೆ. ನಮ್ಮ ಪಕ್ಷವನ್ನ 40 ಪರ್ಸೆಂಟ್ ಸರ್ಕಾರ ಎಂದು ಟೀಕಿಸಿದ್ದರು.

ಮತದಾರರೂ ಅದನ್ನು ನಂಬಿದರು. ಹೊಸ ಕಾಂಗ್ರೆಸ್ ಸರ್ಕಾರ ಬಂದು 6 ತಿಂಗಳಾಗಿದೆ. ಹಗಲು ದರೋಡೆ, ಭ್ರಷ್ಟಾಚಾರ ಹೆಚ್ಚಾಗಿದ್ದು ಭ್ರಷ್ಟಾಚಾರದ ಅನುಷ್ಠಾನ ಕಾಂಗ್ರೆಸ್ ಸರ್ಕಾರದಿಂದ ಆಗುತ್ತಿದೆ ಎಂದು ಆಕ್ಷೇಪಿಸಿದರು. 28ಕ್ಕೆ 28 ಕ್ಷೇತ್ರ ಗೆಲ್ಲುವ ಜೊತೆ ಜೊತೆಗೆ ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಕೂಡ ರಾಜ್ಯವನ್ನು ಬಿಜೆಪಿ ಭದ್ರಕೋಟೆಯಾಗಿ ಮಾಡಲು ಶ್ರಮಿಸುತ್ತೇನೆ ಎಂದು ಬಿ ವೈ ವಿಜಯೇಂದ್ರ ಅವರು ಹೇಳಿದ್ದು ಈ ದುಷ್ಟ ಸರ್ಕಾರಕ್ಕೆ ಆ ಪಕ್ಷದ ಶಾಸಕರೇ ಪಾಠ ಕಲಿಸುತ್ತಾರೆ. ಹಿರಿಯರ ಮಾರ್ಗದರ್ಶನದಲ್ಲೆ, ಸಂಘ ಪರಿವಾರದ ಮಾರ್ಗದರ್ಶನದಡಿ ಬಿಜೆಪಿಗೆ ಶಕ್ತಿ ತುಂಬುತ್ತೇನೆ. ಹಾಗೂ ಹಗಲು ರಾತ್ರಿ ಪ್ರವಾಸ ಮಾಡಿ, ರೈತರು, ಬಡವರ ಪರವಾಗಿ ಧ್ವನಿ ಎತ್ತುತ್ತೇವೆ ಎಂದರು.

ಮುಂದಿನ ಲೋಕಸಭಾ ಚುನಾವಣೆಯಲ್ಲಿ ರಾಜ್ಯದ 28 ಕ್ಷೇತ್ರಗಳಲ್ಲಿ 28 ನ್ನೂ ಗೆಲ್ಲುವ ಮೂಲಕ ಪ್ರಧಾನಿ ನರೇಂದ್ರ ಮೋದಿ ಕೈ ಬಲ ಪಡಿಸಿ ಹೊಸ ಇತಿಹಾಸ ಸೃಷ್ಟಿಸಬೇಕು ಎನ್ನುವುದು ನನ್ನ ಗುರಿಯಾಗಿದೆ ಹಿಂದೆ ಯಡಿಯೂರಪ್ಪಅಧಿಕಾರಅವಧಿಯಲ್ಲಿ 20 ಕ್ಷೇತ್ರ ಗೆದ್ದಿದ್ದೇವೆ. ನಾನು ಎಲ್ಲಾ ಕ್ಷೇತ್ರ ಗೆಲ್ಲಲು ಕಾರ್ಯೋನ್ಮುಖನಾಗಿ ಕೆಲಸ ಮಾಡುವೆ. ಒಂದು ದಿನ ಕೂಡಾ ಬಿಡುವು ನೀಡದೆ ಸಂಚಾರ ಮಾಡುವೆ. ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿ ಚುನಾವಣೆ ಕೂಡಾ ಗೆಲ್ಲಬೇಕಿದ್ದು, ಈ ನಿಟ್ಟಿನಲ್ಲಿ ನಮ್ಮ ಕಾರ್ಯಕರ್ತರಿಗೆ ಶಕ್ತಿ ತುಂಬುವ ಕೆಲಸ ಮಾಡುತ್ತೇವೆ ಲೋಕಸಭಾ ಚುನಾವಣೆಯಲ್ಲಿ ಎಲ್ಲ ಸ್ಥಾನ ಗೆದ್ದು ಕಾಂಗ್ರೆಸ್ ಸರಕಾರಕ್ಕೆ ತಕ್ಕ ಉತ್ತರ ಕೊಡುವುದಾಗಿ ಬಿಜೆಪಿ ನೂತನ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ. ಬಿಜೆಪಿ ಸರ್ಕಾರ 40% ಸರ್ಕಾರ ಎಂದು ಕಾಂಗ್ರೆಸ್ ನಾಯಕರು ಪೂಜೆ ಮಾಡುತ್ತಿದ್ದರು. ಆದರೆ ಇಂದು ಕಾಂಗ್ರೆಸ್ ಅಧಿಕಾರಕ್ಕೆ ಬಂದ ಬಳಿಕ 40% ಅನುಷ್ಠಾನ ಈ ಸರ್ಕಾರ ಮಾಡುತ್ತಿದ್ದೆ. ವರ್ಗಾವಣೆ ದಂಧೆಯಲ್ಲಿ ಮುಳುಗಿದೆ. ಐಟಿ ದಾಳಿ ಕುರಿತು ಕಾಂಗ್ರೆಸ್ ನಾಯಕರು ಸ್ವಾಗತ ಮಾಡಿಲ್ಲ. ಐಟಿ ದಾಳಿಯಲ್ಲಿ ವಶ ಆದ ಹಣ ಕಾಂಗ್ರೆಸ್ ಪಕ್ಷದ್ದು ಎಂದು ರಾಜ್ಯದ ಜನ ಚರ್ಚೆ ಮಾಡುತ್ತಿದ್ದಾರೆ ಎಂದು ವಾಗ್ದಾಳಿ ಮಾಡಿದ ಅವರು, ಸರ್ಕಾರ ಬಂದ ಬಳಿಕ ಒಂದೂ ಯೋಜನೆ ಜಾರಿಯಾಗಿಲ್ಲ. ಜನರಿಗೆ ಅರೆಬರೆ ಬೆಂದ ಗ್ಯಾರಂಟಿ ಸ್ಕೀಮ್ ತುಪ್ಪ ಹಚ್ಚಿದ್ದಾರೆ ಎಂದು ಆರೋಪಿಸಿದರು.

ವರ್ಗಾವಣೆ ದಂಧೆಯಲ್ಲಿ ಕಾಂಗ್ರೆಸ್ ಸರ್ಕಾರ ಇದೆ ಎಂಬುದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಮಗ ಯತೀಂದ್ರ ಸಾಭೀತು ಮಾಡಿದ್ದು, ಅವರ ವಿಡಿಯೋವನ್ನು ರಾಜ್ಯದ ಜನ ನೋಡುತ್ತಿದ್ದಾರೆ. ಐಟಿ ದಾಳಿಯಾದ ಬಳಿಕ ಮತ್ತೊಂದು ದಾಖಲೆ ಸಿಕ್ಕಿದ್ದೆ. ಇದಕ್ಕೆಲ್ಲಾ ರಾಜ್ಯದ ಜನ ಮುಂದೆ ತಕ್ಕ ಉತ್ತರ ನೀಡುತ್ತಾರೆ ಎಂದರು.

ನಾನು ರಾಜ್ಯಾಧ್ಯಕ್ಷ ಸ್ಥಾನ ಪಡೆಯಲು ಅನೇಕ ಹಿರಿಯ ನಾಯಕರು ಕೂಡಾ ಆರ್ಶೀವಾದ ಮಾಡಿದ್ದಾರೆ. ಯತ್ನಾಳ್ ಜೀ , ಸೋಮಣ್ಣ ಅವರ ಬಗ್ಗೆ ಗೌರವ ಇದೆ. ಬರುವ ದಿನಗಳಲ್ಲಿ ಎಲ್ಲರೂ ಕೂಡಾ ನಮ್ಮ ಕೈಜೋಡಿಸುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

### ಮಠಗಳಿಗೆ ಭೇಟಿ

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ರಾಜ್ಯಾಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಗುರುವಾರ ಮೊದಲ ಬಾರಿಗೆ ಕೋಟೆನಾಡು ಚಿತ್ರದುರ್ಗಕ್ಕೆ ಆಗಮಿಸಿ ನಾನಾ ಮಠಗಳಿಗೆ ಭೇಟಿ ನೀಡಿ ಸ್ವಾಮೀಜಿಯವರ ಆಶೀರ್ವಾದ ಪಡೆದರು. ಚಿತ್ರದುರ್ಗ ಮುರುಘಾ ಮಠದ ಸ್ವಾಮೀಜಿಗಳ ಗದ್ದುಗೆಗೆ ನಮಿಸಿ ಉಸ್ತುವಾರಿ ಶ್ರೀ ಬಸವಪ್ರಭು ಸ್ವಾಮೀಜಿ ಅವರಿಂದ ಆಶೀರ್ವಾದ ಪಡೆದರು, ಬಳಿಕಾ, ಅಲ್ಲಿಂದ ಯಾದವಾನಂದ ಗುರುಪೀಠಕ್ಕೆ ಭೇಟಿ ನೀಡಿ ಶ್ರೀ ಕೃಷ್ಣ ಯಾದವಾನಂದ ಸ್ವಾಮೀಜಿ ಅವರ ಆಶೀರ್ವಾದ ಪಡೆದರು. ಬಳಿಕ ಶಿವಶರಣ ಮಾದಾರ ಚನ್ನಯ್ಯ ಗುರುಪೀಠಕ್ಕೆ ಭೇಟಿ ನೀಡಿ ಅಲ್ಲಿನ ಅಲ್ಲಮಪ್ರಭು ದೇವರ ಪುತ್ಥಳಿಗೆ ಪುಷ್ಪನಮನ ಸಲ್ಲಿಸಿದರು. ಶ್ರೀ ಬಸವ ಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಅವರ ಆಶೀರ್ವಾದ ಪಡೆದರು. ಆನಂತರ ಶ್ರೀ ಭೋವಿ ಗುರುಪೀಠಕ್ಕೆ ಭೇಟಿ ನೀಡಿ ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ಯವರ ಆಶೀರ್ವಾದ ಪಡೆದರು.

**ಪ್ರಮುಖ ಸುದ್ದಿ**

# ಕುಂಚಿಟಿಗ ಮಠ, ವಿವಿಧ ಮಠಗಳಿಗೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಭೇಟಿ

» **ಹೊಸದುರ್ಗ**

ತಾಲೂಕಿನ ಕುಂಚಿಟಿಗ ಮಠ, ಭಗೀರಥ ಮಠ, ಸಾಣೇಹಳ್ಳಿ ಮಠ ಮತ್ತು ಕನಕ ಶಾಖಾಮಠಕ್ಕೆ ಗುರುವಾರ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಭೇಟಿ ನೀಡಿ ಮಠಾಧೀಶರಿಗೆ ಸನ್ಮಾನಿಸಿ ಗೌರವಿಸಿ ಆಶೀರ್ವಾದ ಪಡೆದರು.

ಕರ್ನಾಟಕ ಬಿಜೆಪಿ ರಾಜ್ಯಾಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಬಿ.ವೈ.ವಿಜಯೇಂದ್ರ ಅವರು ತಮ್ಮ ಮೊದಲ ಜಿಲ್ಲಾ ಪ್ರವಾಸವನ್ನು ಕೋಟೆನಾಡಿನಿಂದ ಆರಂಭಿಸುವ ಮೂಲಕ ರಾಜ್ಯ ರಾಜಕಾರಣದಲ್ಲಿ ಸಂಚಲನ ಮೂಡಿಸಿದ್ದಾರೆ. ಸಾಮಾನ್ಯವಾಗಿ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಬಳಿಕ ತಮ್ಮ ಸ್ವಕ್ಷೇತ್ರಕ್ಕೆ ಹೋಗುವುದು ವಾಡಿಕೆ. ಆದರೆ, ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಅವರ ಪುತ್ರ ಯಂಗ್ ಸ್ಟಾರ್ ಬಿ.ವೈ.ವಿಜಯೇಂದ್ರ ಹೊಸ ಸಂಪ್ರದಾಯಕ್ಕೆ ಮುನ್ನುಡಿ ಬರೆದಿದ್ದಾರೆ.

ಚಿತ್ರದುರ್ಗದ ಮುರುಘಾ ಮಠ, ಮಡಿವಾಳ ಮಾಚಿದೇವ ಮಠ, ಭೋವಿಗುರುಪೀಠ, ಮಾದರ ಚನ್ನಯ್ಯ ಗುರುಪೀಠಕ್ಕೆ ಭೇಟಿ ನೀಡಿ ಹೊಳಲ್ಕೆರೆ ಮಾರ್ಗವಾಗಿ ಹೊಸದುರ್ಗ ತಾಲೂಕಿನ ಬಿವಿ ನಗರದ ಭಗೀರಥಗುರು ಪೀಠಕ್ಕೆ ಭೇಟಿ ನೀಡಿ ಶ್ರೀ ಪುರುಷೋತ್ತಮನಂದಪುರಿ ಸ್ವಾಮೀಜಿ ಆಶೀರ್ವಾದ ಪಡೆದರು. ಅಲ್ಲಿಂದ ಸಾಣೇಹಳ್ಳಿ ಮಠಕ್ಕೆ ಭೇಟಿ ನೀಡಿ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಆಶೀರ್ವಾದ ಪಡೆದರು. ನಂತರ ಕೆಲ್ಲೋಡು ಕನಕ ಮಠಕ್ಕೆ ಭೇಟಿ ನೀಡಿ ಶ್ರೀ ಈಶ್ವರಾನಂದಪುರಿ ಸ್ವಾಮೀಜಿ ಆಶೀರ್ವಾದ ಪಡೆದರು. ನಂತರ ಕೊನೆಯದಾಗಿ ಕುಂಚಿಟಿಗ ಮಠಕ್ಕೆ ಭೇಟಿ ನೀಡಿ ಶ್ರೀ ಶಾಂತವೀರ ಸ್ವಾಮೀಜಿ ಆಶೀರ್ವಾದ ಪಡೆದರು. ಈ ವೇಳೆ ಕುಂಚಿಟಿಗ ಮಠದ ವತಿಯಿಂದ, ಹೊಸದುರ್ಗ ತಾಲೂಕು ಬಿಜೆಪಿ ಘಟಕದ ವತಿಯಿಂದ, ವೀರಶೈವ ಲಿಂಗಾಯತ ವೇದಿಕೆ ವತಿಯಿಂದ ಹಾಗೂ ವಿಜಯೇಂದ್ರ ಯುವ ಪಡೆ ವತಿಯಿಂದ ನೂತನ ರಾಜ್ಯ ಅಧ್ಯಕ್ಷರನ್ನು ಸನ್ಮಾನಿಸಿ ಗೌರವಿಸಿ ಅಭಿನಂದಿಸಲಾಯಿತು.

ಇದೇ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಬಿ.ವೈ. ವಿಜಯೇಂದ್ರ ಮಾತನಾಡಿ, ರಾಜ್ಯದ 28 ಲೋಕಸಭಾ ಸ್ಥಾನಗಳನ್ನು ಬಿಜೆಪಿ ಗೆಲ್ಲುವ ಮೂಲಕ ಹೊಸ ಇತಿಹಾಸ ಸೃಷ್ಟಿಸಬೇಕು ಎನ್ನುವುದು ನಮ್ಮ ಗುರಿ. ಒಂದು ದಿನವೂ ಮನೆಯಲ್ಲಿರದೆ, ರಾಜ್ಯ ಪ್ರವಾಸ ಮಾಡುತ್ತೇನೆ. ಲೋಕಸಭೆ ಜೊತೆಗೆ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆಗೂ ಮಹತ್ವ ಕೊಟ್ಟು ಕಾರ್ಯಕರ್ತರಿಗೆ ಶಕ್ತಿ ತುಂಬುವ ಕೆಲಸ ಮಾಡುತ್ತೇವೆ' ಎಂದರು.

ಈ ವೇಳೆ ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ, ಜಿಲ್ಲಾ ಬಿಜೆಪಿ ಅಧ್ಯಕ್ಷ ಎ.ಮುರುಳಿ ಮತ್ತು ರಾಜ್ಯ ಖನಿಜ ನಿಗಮದ ಮಾಜಿ ಅಧ್ಯಕ್ಷ ಎಸ್.ಲಿಂಗಮೂರ್ತಿ ಸೇರಿದಂತೆ ಬಿಜೆಪಿ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರಿದ್ದರು.



> 'ಬಿಜೆಪಿ ಸರ್ಕಾರ ಇದ್ದಾಗ ಶೇ40 ಭ್ರಷ್ಟಾಚಾರ ಎಂದು ಕಾಂಗ್ರೆಸ್ ದಿನವೂ ಆರೋಪ ಮಾಡುತ್ತಿತ್ತು. ಆದರೆ, ಈಗಿನ ಕಾಂಗ್ರೆಸ್ ಸರ್ಕಾರ ಮೊದಲ ದಿನದಿಂದಲೇ ವರ್ಗಾವಣೆ ದಂಧೆ ಮಾಡುತ್ತಿದೆ. ಐಟಿ ದಾಳಿಯಲ್ಲಿ ಕೋಟ್ಯಾಂತರ ಹಣ ಸಿಕ್ಕಿದಾಗ ಕಾಂಗ್ರೆಸ್‌ನವರು ಸ್ವಾಗತ ಮಾಡಲಿಲ್ಲ, ಅವರಿಗೆ ನೋವಾಗಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬಂದು 6 ತಿಂಗಳಾಗಿದೆ. ಒಂದು ಹೊಸ ಯೋಜನೆ ಜಾರಿಗೆ ಬಂದಿಲ್ಲ. ಅರೆಬರೆ ಬೆಂದಿರುವ ಗ್ಯಾರಂಟಿಗಳನ್ನು ನೀಡಿ ಜನರಿಗೆ ವಂಚಿಸುತ್ತಿದ್ದಾರೆ. ರಾಜ್ಯದಲ್ಲಿ ಹಗಲು ದರೋಡೆ ನಡೆಯುತ್ತಿದೆ.
>
> » **ಬಿ.ವೈ.ವಿಜಯೇಂದ್ರ ಅಧ್ಯಕ್ಷರು, ರಾಜ್ಯ ಬಿಜೆಪಿ, ಕರ್ನಾಟಕ**

# ಜೈಲಿನಿಂದ ಶರಣರು ರಿಲೀಸ್

## ಮೌನವಾಗಿ ದಾವಣಗೆರೆ ಕಡೆ ಪ್ರಯಾಣ

» **ಚಿತ್ರದುರ್ಗ**

ಪೋಕ್ಸೋ ಪ್ರಕರಣದಲ್ಲಿ 14 ತಿಂಗಳ ಹಿಂದೆ ಬಂಧನಕ್ಕೆ ಒಳಗಾಗಿದ್ದ ಚಿತ್ರದುರ್ಗದ ಡಾ.ಶಿವಮೂರ್ತಿ ಮುರುಘರಾಜೇಂದ್ರ ಸ್ವಾಮೀಜಿ ಅವರು ಜೈಲಿನಿಂದ ಬಿಡುಗಡೆಯಾಗಿದ್ದಾರೆ.



ಸ್ವಾಮೀಜಿ ಅವರಿಗೆ ಕಳೆದ ವಾರವೇ ಹೈಕೋರ್ಟ್ ಜಾಮೀನು ನೀಡಿತ್ತು. ಮತ್ತೊಂದು ಪ್ರಕರಣದಲ್ಲಿ ಚಿತ್ರದುರ್ಗದಲ್ಲಿ ಗುರುವಾರ ವಿಚಾರಣೆ ನಡೆಯುತ್ತಿದೆ. ಅಲ್ಲಿಯೂ ಜಾಮೀನು ದೊರೆಯುವ ನಿರೀಕ್ಷೆಯಿತ್ತು.

ಇದರ ನಡುವೆ ಹೈಕೋರ್ಟ್ ನೀಡಿದ್ದ ಷರತ್ತು ಬದ್ಧ ಜಾಮೀನಿನ ಆದೇಶ ಪ್ರತಿಗಳು ಚಿತ್ರದುರ್ಗ ಜೈಲಿನ ಅಧಿಕಾರಿಗಳಿಗೆ ತಲುಪಿರಲಿಲ್ಲ. ಗುರುವಾರ ಬೆಳಿಗ್ಗೆ ಮುರುಘರಾಜೇಂದ್ರ ಶರಣರ ಪರವಾದ ವಕೀಲರು ಹಸ್ತಾಂತರಿಸಿದ್ದರಿಂದ ಅವರನ್ನು ಬಿಡುಗಡೆ ಮಾಡಲಾಗಿದೆ.

1ನೇ ಪ್ರಕರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ಷರತ್ತುಬದ್ಧ ಜಾಮೀನು ನೀಡಿದ್ದು, ಈ ಪ್ರಕಾರ ಮುರುಘಾಶ್ರೀ ಚಿತ್ರದುರ್ಗ ಪ್ರವೇಶಿಸುವಂತಿಲ್ಲ. ಇಬ್ಬರು ಶ್ಯೂರಿಟಿ ಒದಗಿಸಬೇಕು. ಮತ್ತೆ ಅಪರಾಧ ಕೃತ್ಯವೆಸಗುವಂತಿಲ್ಲ. ಪಾಸ್ ಪೋರ್ಟ್ ಅನ್ನು ವಶಕ್ಕೆ ನೀಡುವುದೂ ಸೇರಿದಂತೆ ಹಲವಾರು ಷರತ್ತುಗಳನ್ನು ನ್ಯಾಯಾಲಯ ವಿಧಿಸಿದೆ. ಇವುಗಳನ್ನೆಲ್ಲಾ ಪಾಲಿಸುವುದಾಗಿ ಮುರುಘಾ ಶರಣರ ಪರ ವಕೀಲರು ಮುಚ್ಚಳಿಕೆ ಬರೆದುಕೊಟ್ಟಿದ್ದಾರೆ.

ಕಳೆದ ವರ್ಷದ ಆಗಸ್ಟ್ 22ರಂದು ಶರಣರು ಹಾಗೂ ಐದು ಮಂದಿ ವಿರುದ್ಧ ಮಠದ ವಿದ್ಯಾರ್ಥಿನಿಯೊಬ್ಬರು ಲೈಂಗಿಕ ದೌರ್ಜನ್ಯದ ಪ್ರಕರಣವನ್ನು ಮೈಸೂರಿನ ನಜರ್‌ಬಾದ್ ಠಾಣೆಯಲ್ಲಿ ದಾಖಲಿಸಿದ್ದರು. ಇದನ್ನು ಚಿತ್ರದುರ್ಗಕ್ಕೆ ವರ್ಗಾಯಿಸಲಾಗಿತ್ತು. ಆನಂತರ ಶರಣರನ್ನು ಬಂಧಿಸಲಾಗಿತ್ತು.

ಧಾರವಾಡ ಜೈಲಿಗೆ ವರ್ಗಾಯಿಸಿ ಕೆಲ ದಿನ ಶಿವಮೊಗ್ಗ ಜೈಲಿನಲ್ಲಿ ಇರಿಸಲಾಗಿತ್ತು. ನಂತರ ಚಿತ್ರದುರ್ಗದಲ್ಲಿಯೇ ಇರಿಸಲಾಗಿತ್ತು. ಇದಾದ ಬಳಿಕ ಮಠಕ್ಕೆ ಆಡಳಿತಾಧಿಕಾರಿಯನ್ನೂ ನೇಮಿಸಿತ್ತು. ಈಗಾಗಲೇ ಇತರರು ಜಾಮೀನಿನ ಮೇಲೆ ಬಿಡುಗಡೆಯಾಗಿದ್ದು, ಶರಣರು ಮಾತ್ರ ಬಿಡುಗಡೆಯಾಗಿರಲಿಲ್ಲ. ನವೆಂಬರ್ 8ರಂದು ಹೈಕೋರ್ಟ್ ಷರತ್ತು ಬದ್ಧ ಜಾಮೀನು ನೀಡಿದ ನಂತರ ಶರಣರ ಬಿಡುಗಡೆ ಕುರಿತು ಚರ್ಚೆಗಳು ನಡೆದಿದ್ದವು. ಈಗ ಮತ್ತೊಂದು ಪ್ರಕರಣದ ಜಾಮೀನು ದೊರೆಯುವ ಮುನ್ನವೇ ಬಿಡುಗಡೆ ಸುಲಭವಾಗಿದೆ.

ಬಿಡುಗಡೆಯಾದ ಸ್ವಾಮೀಜಿ ಮಾಧ್ಯಮದವರೊಂದಿಗೆ ಮಾತನಾಡದೇ ದಾವಣಗೆರೆಗೆ ತೆರಳಿದರು. ಅಲ್ಲಿ ಭಕ್ತರ ಮನೆಯಲ್ಲಿ ರಲಿದ್ದು, ಅಲ್ಲಿಂದಲೇ ನ್ಯಾಯಾಲಯದ ವಿಚಾರಣೆಯನ್ನು ವಿಡಿಯೋ ಕಾನ್ಫರೆನ್ಸ್ ಮುಖಾಂತರ ಎದುರಿಸಲಿದ್ದಾರೆ ಎನ್ನಲಾಗಿದೆ.


**ಗೌರವಾನ್ವಿತ 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಚಿತ್ರದುರ್ಗ.**
**ಸಿ.ಆರ್.ಮಿಸ್.ಸಂಖ್ಯೆ: 847/2023**

**ಅರ್ಜಿದಾರರು:**

1) ರಘು ಚಿಂತನ್. ಎನ್ ಬಿನ್ ನಿಂಗಪ್ಪ. ಎಂ, ವಯಸ್ಸು ಸುಮಾರು 19 ವರ್ಷ, ವಾಸ: ನರೇನಹಾಳ್ ಗ್ರಾಮ, ಜೆ.ಎನ್. ಕೋಟೆ ಅಂಚೆ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ.
2) ಶಾಲಿನಿ. ಎನ್ ಬಿನ್ ನಿಂಗಪ್ಪ. ಎಂ, ವಯಸ್ಸು ಸುಮಾರು 15 ವರ್ಷ, ವಾಸ: ವಾಗ್ದೇವಿ ಶಾಲೆ ಹಿಂಭಾಗ, ಹಿರಿಯೂರು.
2ನೇ ಅರ್ಜಿದಾರರು ಅಪ್ರಾಪ್ತ ವಯಸ್ಕರಾಗಿದ್ದು ಅವರ ಪರವಾಗಿ ಅವರ ಅಣ್ಣ 1ನೇ ಅರ್ಜಿದಾರರು ಪ್ರತಿನಿದಿಸಲ್ಪಡುವರು.

**:ವಿರುದ್ಧ:**

ಎದುರುದಾರರು: ತಹಶೀಲ್ದಾರ್ / ಜನನ ಮತ್ತು ಮರಣ ನೋಂದಣಾಧಿಕಾರಿಗಳು, ತಾಲ್ಲೂಕು ಕಛೇರಿ, ಚಿತ್ರದುರ್ಗ.

**ಸಾರ್ವಜನಿಕ ಪ್ರಕಟಣೆ**

ಈ ಮೂಲಕ ತಿಳಿಯಪಡಿಸುವುದೇನೆಂದರೆ, ಈ ಮೇಲ್ಕಂಡ ಅರ್ಜಿದಾರರು, ಎದುರುದಾರರ ವಿರುದ್ಧ ಮಾನ್ಯ ಘನ ನ್ಯಾಯಾಲಯದಲ್ಲಿ 1 ಮತ್ತು 2ನೇ ಅರ್ಜಿದಾರರ ಅಜ್ಜ ಮೈಲಾರಪ್ಪ ಬಿನ್ ಯಲ್ಲಪ್ಪ ಇವರು ದಿನಾಂಕ: 20.06.1975 ರಂದು ತಮ್ಮ ಊರಾದ ನರೇನಹಾಳ್ ಗ್ರಾಮ, ಜೆ.ಎನ್. ಕೋಟೆ ಅಂಚೆ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆಯಲ್ಲಿ ಮರಣ ಹೊಂದಿದ್ದು ಕುಟುಂಬದ ಆಸ್ತಿಗಳ ಖಾತೆ ಮೂಲಕ ಹಕ್ಕು ಬದಲಾವಣೆ ಮತ್ತು ಇತರೆ ಸೌಲಭ್ಯಗಳನ್ನು ಪಡೆಯುವ ಸಲುವಾಗಿ ನ್ಯಾಯಾಲಯದ ಮೂಲಕ ಸದರಿ ಮೈಲಾರಪ್ಪ ಬಿನ್ ಯಲ್ಲಪ್ಪ ರವರ ಮರಣ ಪ್ರಮಾಣ ಪತ್ರವನ್ನು ಪಡೆಯಲು ಈ ಅರ್ಜಿಯನ್ನು ನ್ಯಾಯಾಲಯದಲ್ಲಿ ಸಲ್ಲಿಸಿರುತ್ತಾರೆ. ಈ ವಿಷಯದ ಬಗ್ಗೆ ಈ ಅರ್ಜಿಯಲ್ಲಿ ತಿಳಿಸಿರುವ ಅರ್ಜಿದಾರರನ್ನು ಬಿಟ್ಟು ಬೇರೆ ವಾರಸುದಾರರು ತಕರಾರು ಸಲ್ಲಿಸುವವರಿದ್ದರೆ ನ್ಯಾಯಾಲಯದಲ್ಲಿ ಮುದ್ದತ್ತು ದಿನಾಂಕ: 27.12.2023 ರಂದು ಬೆಳಿಗ್ಗೆ 11:00 ಗೆ ಈ ಕೇಸಿನಲ್ಲಿ ಖುದ್ದಾಗಿ ಆಗಲೀ ಅಥವಾ ತಮ್ಮ ವಕೀಲರ ಮುಖಾಂತರವಾಗಲೀ ನ್ಯಾಯಾಲಯಕ್ಕೆ ಹಾಜರಾಗಿ ತಮ್ಮ ತಕರಾರನ್ನು ಸಲ್ಲಿಸತಕ್ಕದ್ದು, ತಪ್ಪಿದ್ದಲ್ಲಿ ಈ ಮೇಲ್ಕಂಡ ಅರ್ಜಿಯನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ಎಂದು ತಿಳಿಯಿರಿ.

ನ್ಯಾಯಾಲಯದ ಮುದ್ರೆ ಮತ್ತು ನನ್ನ ಸಹಿಯೊಂದಿಗೆ ದಿನಾಂಕ: 15.11.2023 ರಂದು ನೀಡಲಾಗಿದೆ.

ಸಹಿ/– ಶಿರಸ್ತೇದಾರರು, ಗೌರವಾನ್ವಿತ 1ನೇ ಕಿರಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ., ಚಿತ್ರದುರ್ಗ.

ಸಹಿ/– ಸಿ. ತಿಮ್ಮಣ್ಣ, ಅರ್ಜಿದಾರರ ಪರ ವಕೀಲರು, ಚಿತ್ರದುರ್ಗ.
ದಿನಾಂಕ: 15.11.2023.

## ಫಾಸ್ಟ್ ನ್ಯೂಸ್

### ನ.17 ರಂದು ಪೊಲೀಸ್ ವಸತಿ ಸಮುಚ್ಚಯ ಮತ್ತು ಪೊಲೀಸ್ ಠಾಣೆ ನೂತನ ಕಟ್ಟಡ ಉದ್ಘಾಟನೆ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಇದೇ ನ.17 ರಂದು ಮಧ್ಯಾಹ್ನ 12 ಗಂಟೆಗೆ ಚಿತ್ರದುರ್ಗದ ಹೊಸಪೇಟೆ ರಸ್ತೆ, ಬಸವೇಶ್ವರ ನಗರದಲ್ಲಿ ಪೊಲೀಸ್ ವಸತಿ ಸಮುಚ್ಚಯದ ಮತ್ತು ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಯ ನೂತನ ಕಟ್ಟಡ ಉದ್ಘಾಟನಾ ಸಮಾರಂಭ ನಡೆಯಲಿದೆ. ಗೃಹ ಮಂತ್ರಿಗಳಾದ ಡಾ. ಜಿ. ಪರಮೇಶ್ವರ ಅವರು ನೂತನ ಕಟ್ಟಡ ಉದ್ಘಾಟನೆ ನೇರವೇರಿಸುವರು. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ. ನಾರಾಯಣಸ್ವಾಮಿ, ಯೋಜನಾ ಮತ್ತು ಸಾಂಖ್ಯಿಕ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಘನ ಉಪಸ್ಥಿತಿ ವಹಿಸುವವರು. ಶಾಸಕ ಕೆ.ಸಿ ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವವರು. ಗೌರವಾನ್ವಿತ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ್ ಭಾಷಾ. ಮುಖ್ಯ ಅತಿಥಿಗಳಾಗಿ ಶಾಸಕರುಗಳಾದ ಟಿ.ರಘುಮೂರ್ತಿ, ಎನ್.ವೈ.ಗೋಪಾಲಕೃಷ್ಣ, ಡಾ.ಎಂ.ಚಂದ್ರಪ್ಪ, ಬಿ.ಜಿ. ಗೋವಿಂದಪ್ಪ, ವಿಧಾನ ಪರಿಷತ್ ಸದಸ್ಯರುಗಳಾದ ಡಾ.ವೈ.ಎ ನಾರಾಯಣಸ್ವಾಮಿ, ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್ ಭಾಗವಹಿಸುವರು. ವಿಶೇಷ ಆಹ್ವಾನಿತರಾಗಿ ಒಳಾಡಳಿತ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಡಾ.ರಜನೀಶ್ ಗೋಯಲ್, ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ಡಿಜಿ ಮತ್ತು ಡಿ.ಜಿ.ಪಿ ಅಲೋಕ್ ಮೋಹನ್, ಬೆಂಗಳೂರು ಕೆ.ಎಸ್.ಪಿ.ಹೆಚ್ ಮತ್ತು ಐ.ಡಿ.ಸಿ.ಎಲ್ ಅಧ್ಯಕ್ಷರು ಹಾಗೂ ವ್ಯವಸ್ಥಾಪಕ ನಿರ್ದೇಶಕ ಕೆ.ರಾಮಚಂದ್ರರಾವ್, ಕಾನೂನು ಮತ್ತು ಸುವ್ಯವಸ್ಥೆಯ ಎ.ಡಿ.ಜಿ.ಪಿ. ಆರ್. ಹಿತೇಂದ್ರ, ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಮ್ಲಾನ್ ಆದಿತ್ಯ ಬಿಸ್ವಾಸ್, ದಾವಣಗೆರೆ ಪೂರ್ವ ವಲಯದ ಉಪ ಪೊಲೀಸ್ ಮಹಾ ನಿರೀಕ್ಷಕ ಡಾ.ಕೆ. ತ್ಯಾಗರಾಜ್, ಜಿಲ್ಲಾಧಿಕಾರಿ ದಿವ್ಯಪ್ರಭು ಜಿಆರ್‌ಜೆ, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್. ಜೆ.ಸೋಮಶೇಖರ್, ಬೆಂಗಳೂರು ಕೆ.ಎಸ್.ಪಿ.ಹೆಚ್ ಮತ್ತು ಐ.ಡಿ.ಸಿ.ಎಲ್ ಅಭಿಯಂತರ ಬಿ.ಹೆಚ್. ಮಂಜುನಾಥ ಮುಂತಾದವರು ಭಾಗವಹಿಸುವರು ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕ ಧರ್ಮೇಂದ್ರ ಕುಮಾರ್ ಮೀನಾ ತಿಳಿಸಿದ್ದಾರೆ.

### ಗೃಹ ಸಚಿವ ಪರಮೇಶ್ವರ ಪ್ರವಾಸ ಕಾರ್ಯಕ್ರಮ

» **ಚಿತ್ರದುರ್ಗ**

ರಾಜ್ಯ ಗೃಹ ಸಚಿವರಾದ ಡಾ. ಜಿ. ಪರಮೇಶ್ವರ ಅವರು ನ. 17 ರಂದು ಒಂದು ದಿನದ ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಸಚಿವರು ಅಂದು ಬೆಳಿಗ್ಗೆ ಬೆಂಗಳೂರಿನಿಂದ ಹೊರಟು ಬೆ. 10.30 ಗಂಟೆಗೆ ಚಿತ್ರದುರ್ಗ ನಗರಕ್ಕೆ ಆಗಮಿಸುವರು. ಬೆ. 11 ಗಂಟೆಗೆ ಜಿಲ್ಲಾ ಪೊಲೀಸ್ ಅಧೀಕ್ಷಕರ ಕಚೇರಿಯಲ್ಲಿ ಇಲಾಖಾ ಪ್ರಗತಿ ಪರಿಶೀಲನೆ ಸಭೆ ನಡೆಸುವರು. ಮದ್ಯಾಹ್ನ 12 ಗಂಟೆಗೆ ಚಿತ್ರದುರ್ಗದ ಬಸವೇಶ್ವರ ನಗರದಲ್ಲಿ ಏರ್ಪಡಿಸಿರುವ 72 ಪೊಲೀಸ್ ವಸತಿ ಗೃಹಗಳ ಉದ್ಘಾಟನೆ, ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣಾ ಕಟ್ಟಡ ಉದ್ಘಾಟನೆ ಹಾಗೂ ತಳಕು ಪೊಲೀಸ್ ಠಾಣಾ ಕಟ್ಟಡ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸುವರು. ಸಚಿವರು ಅದೇ ದಿನ ಸಂಜೆ 4 ಗಂಟೆಗೆ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಸಚಿವರ ವಿಶೇಷ ಕರ್ತವ್ಯಾಧಿಕಾರಿ ತಿಳಿಸಿದ್ದಾರೆ.

### ವೀರಶೈವ ಸಹಕಾರಿ ಸಂಘದ ಉಪಾಧ್ಯಕ್ಷರಾಗಿ ಕೆ.ನಾಗೇಶ್ ಆಯ್ಕೆ



» **ಚಳ್ಳಕೆರೆ**

ನಗರದ ವೀರಶೈವ ಸೌಹಾರ್ದ ಪತ್ತಿನ ಸಹಕಾರ ಸಂಘ ನಿಯಮಿತ ಇದರ ಉಪಾಧ್ಯಕ್ಷ ಸ್ಥಾನಕ್ಕಾಗಿ ಆಡಳಿತ ಮಂಡಳಿ ಚುನಾವಣೆ ನಡೆಸಿದ್ದು, ನಿರ್ದೇಶಕರಾಗಿ ಹಲವಾರು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಕೆ.ನಾಗೇಶ್‌ರವರನ್ನು ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆ ಮಾಡಲಾಯಿತು ಎಂದು ಅಧ್ಯಕ್ಷ ಎಸ್.ಜಯಪ್ರಕಾಶ್ ತಿಳಿಸಿದರು. ಅವರು, ಆಡಳಿತ ಮಂಡಳಿತ ಸಭೆ ಸೇರಿ ಉಪಾಧ್ಯಕ್ಷ ಸ್ಥಾನಕ್ಕೆ ನಮ್ಮಲ್ಲೇ ಆಯ್ಕೆ ನಡೆಯಬೇಕಿದ್ದು, ಎಲ್ಲಾ ನಿರ್ದೇಶಕ ಅಭಿಪ್ರಾಯ ಪಡೆದು ಅಂತಿಮವಾಗಿ ಕೆ.ನಾಗೇಶ್‌ರವರನ್ನು ಉಪಾಧ್ಯಕ್ಷ ಸ್ಥಾನಕ್ಕೆ ಆಯ್ಕೆ ಮಾಡಲಾಗಿದೆ. ಈ ಸಂದರ್ಭದಲ್ಲಿ ಬ್ಯಾಂಕ್‌ನ ನಿರ್ದೇಶಕ ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು ಎಂದರು.

ಉಪಾಧ್ಯಕ್ಷರಾಗಿ ಆಯ್ಕೆಯಾದ ನಂತರ ಪತ್ರಿಕೆಯೊಂದಿಗೆ ಮಾತನಾಡಿದ ನೂತನ ಉಪಾಧ್ಯಕ್ಷ ಕೆ.ನಾಗೇಶ್, ವೀರಶೈವ ಸೌಹಾರ್ದ ಪತ್ತಿನ ಸಹಕಾರಿ ಸಂಘ ನಿಯಮಿತ ಇದರ ನಿರ್ದೇಶಕನಾಗಿ ಕಾರ್ಯನಿರ್ವಹಿಸಿ ಅನುಭವ ಹೊಂದಿದ್ದು, ಈ ಹಿನ್ನೆಲೆಯಲ್ಲಿ ಆಡಳಿತ ಮಂಡಳಿ ಉಪಾಧ್ಯಕ್ಷ ಸ್ಥಾನ ನೀಡಿದೆ.

### 70ನೇ ಅಖಿಲ ಭಾರತ ಸಹಕಾರ ಸಪ್ತಾಹದಲ್ಲಿ ಸಹಕಾರರತ್ನ ಪುರಸ್ಕೃತ ಎಸ್.ಆರ್.ಗಿರೀಶ್ ಸಲಹೆ

# ಸಹಕಾರ ಕ್ಷೇತ್ರದಿಂದ ಹೆಚ್ಚು ಸಹಕಾರ ಪಡೆದುಕೊಳ್ಳಿ

» **ಚಿತ್ರದುರ್ಗ**



ಚಿತ್ರದುರ್ಗ ಬರದ ನಾಡು. ಹಾಗಾಗಿ ಸಂಕಷ್ಟದಲ್ಲಿರುವ ನಮ್ಮ ಜಿಲ್ಲೆಯಲ್ಲಿ ಸಹಕಾರ ಕ್ಷೇತ್ರದಿಂದ ಹೆಚ್ಚು ಸಹಕಾರ ಪಡೆದುಕೊಳ್ಳಬೇಕು ಎಂದು ಸಹಕಾರರತ್ನ ಪುರಸ್ಕೃತರು ಹಾಗೂ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ನಿರ್ದೇಶಕ ಎಸ್.ಆರ್.ಗಿರೀಶ್ ಹೇಳಿದರು.

ಇಲ್ಲಿನ ಜಿಲ್ಲಾ ಸಹಕಾರ ಯೂನಿಯನ್‌ನ ಸಹಕಾರ ಭವನದಲ್ಲಿ ಸಹಕಾರ ಇಲಾಖೆ, ಜಿಲ್ಲಾ ಸಹಕಾರ ಯೂನಿಯನ್, ಚಿತ್ರದುರ್ಗ ತಾಲ್ಲೂಕಿನಲ್ಲಿ ಬರುವ ಎಲ್ಲಾ ಸಹಕಾರ ಸಂಘಗಳ ಮತ್ತು ಬ್ಯಾಂಕುಗಳ ಸಂಯುಕ್ತ ಆಶ್ರಯದಲ್ಲಿ ಈಚೆಗೆ ಹಮ್ಮಿಕೊಂಡಿದ್ದ 70ನೇ ಅಖಿಲ ಭಾರತ ಸಹಕಾರ ಸಪ್ತಾಹದ ಉದ್ಘಾಟನಾ ಸಮಾರಂಭದ ಸಹಕಾರ ಸಂಸ್ಥೆಗಳಲ್ಲಿ ಇತ್ತೀಚಿನ ಬೆಳವಣಿಗೆಗಳು ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

ಅಖಿಲ ಭಾರತ ಸಹಕಾರ ಸಪ್ತಾಹವನ್ನು ಪ್ರತಿ ವರ್ಷದಂತೆ 7 ದಿನಗಳು ಹಬ್ಬದರೀತಿಯಲ್ಲಿ ಬಹಳ ಅರ್ಥಪೂರ್ಣವಾಗಿ ನವೆಂಬರ್ 14 ರಿಂದ 20 ರವರೆಗೆ ಶ್ರೀಜವಾಹರಲಾಲ್ ನೆಹರು ಅವರ ಜನ್ಮ ದಿನದಂದು ಪ್ರಾರಂಭವಾಗಿ ದೇಶದಾದ್ಯಂತ 7 ದಿನಗಳು ಅರ್ಥಪೂರ್ಣವಾಗಿ ಯಶಸ್ವಿಯಾಗಿ ಆಚರಿಸಲಾಗುವುದು ಎಂದರು.

ವಾರ್ಷಿಕ ವರ್ಷದಲ್ಲಿ ಸಹಕಾರ ಸಂಘಗಳ ಪ್ರಗತಿಗಳು ಹಾಗೂ ಕಾನೂನಿನ ತಿದ್ದುಪಡಿಗಳ ಕುರಿತು ಚರ್ಚಿಸಲಾಗುವುದು ಹಾಗೂ ಕೇಂದ್ರ ಸರ್ಕಾರವು ಸಹಕಾರ ಕ್ಷೇತ್ರಕ್ಕೆ ಒಂದು ಸಚಿವಾಲಯವನ್ನು ಕೇಂದ್ರದಲ್ಲಿ ಆರಂಭಿಸಿರುತ್ತಾರೆ.ಇದರ ವತಿಯಿಂದ ಸಹಕಾರ ಕ್ಷೇತ್ರದ ಬೆಳವಣಿಗೆಗಳ ಬಗ್ಗೆ ಕುರಿತು ಚರ್ಚಿಸಲಾಗುವುದು ಎಂದರು.

ಸಹಕಾರರತ್ನ ಪುರಸ್ಕೃತರು ಹಾಗೂ ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಜಿಂಕಲು ಬಸವರಾಜ್ ಮಾತನಾಡಿ, 1906ರಲ್ಲಿ ಪ್ರಪ್ರಥಮವಾಗಿ ಗದಗ ಜಿಲ್ಲೆಯ ಕಣಗಿನ ಹಾಳ್‌ನಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಪ್ರಾರಂಭವಾಯಿತು. ಕಾನೂನಿನ ಚೌಕಟ್ಟಿನ ಮೂಲಕ ನಡೆದುಕೊಂಡು ಸಂಘವು ನಡೆಸುತ್ತಿದ್ದು, ಎಲ್ಲಾ ಕ್ಷೇತ್ರಗಳಿಗಿಂತ ಸಹಕಾರ ಕ್ಷೇತ್ರವು ಅತ್ಯಂತ ಮಹತ್ವವಾದ ಈ ಕ್ಷೇತ್ರದಲ್ಲಿ ಕೆಲಸ ಮಾಡುವುದು ನಮ್ಮ ಪುಣ್ಯ ಎಂದು ತಿಳಿಸಿದರು.

ರೈತರು ಸಹಕಾರ ಇಲಾಖೆ, ಸಹಕಾರ ಬ್ಯಾಂಕುಗಳಲ್ಲಿ ಸಿಗುವ ಸೌಲಭ್ಯವನ್ನು ಪಡೆದುಕೊಳ್ಳಬೇಕು. ಆಡಳಿತ ಮಂಡಳಿಯಲ್ಲಿ ಸಹಕಾರ ಕಾನೂನು ಬಗ್ಗೆ ಮಾಹಿತಿ ಪಡೆಯಬೇಕು. ಕಾನೂನಿನ ಅರಿವು ತಿಳಿದುಕೊಂಡಾಗ ಮಾತ್ರ ಸಹಕಾರ ಸಂಘಗಳನ್ನು ಅಭಿವೃದ್ಧಿ ಪಡಿಸಲು ಸಾಧ್ಯ ಎಂದು ತಿಳಿಸಿದರು.

ಚಿತ್ರದುರ್ಗ ಟಿಎಪಿಸಿಎಂಎಸ್ ಅಧ್ಯಕ್ಷ ಹೆಚ್.ಎಂ.ಮಂಜುನಾಥಪ್ಪ ಮಾತನಾಡಿ, ಸಹಕಾರ ಸಂಘಗಳನ್ನು ಬಲಪಡಿಸಲು ಸಂಘಗಳ ಆಡಳಿತ ಮಂಡಳಿ ಉತ್ತಮವಾಗಿ ಕೆಲಸ ನಿರ್ವಹಿಸುವುದು ನಮ್ಮ ಕರ್ತವ್ಯವಾಗಿದೆ ಎಂದರು.

ಬಡವ, ದುರ್ಬಲ ವರ್ಗದವರಿಗೆ ಹಾಗೂ ರೈತರಿಗೆ ಕಡಿಮೆ ವೆಚ್ಚದಲ್ಲಿ ಅನುಕೂಲವಾಗುವಂತೆ ಜೆನಿರಿಕ್ ಔಷದಗಳನ್ನು ತಮ್ಮ ಸಂಘಗಳಿಂದ ಮಾರಾಟಮಾಡುತ್ತಿದ್ದೇವೆ. ಇದರ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಕೇಂದ್ರ ಸರ್ಕಾರದಿಂದ ಸಹಕಾರ ಸಚಿವಾಲಯವನ್ನು ಪ್ರಾರಂಭಿಸಿ ಸಹಕಾರರಂಗಕ್ಕೆ ರೂ.900 ಕೋಟಿಯನ್ನು ಬಜೆಟ್‌ನಲ್ಲಿ ಮೀಸಲಿಟ್ಟಿರುವುದು ಒಂದು ಹೆಮ್ಮೆಯ ವಿಷಯವಾಗಿದೆ. ರೈತರಿಗೆ ಸಾಲ ಸೌಲಭ್ಯಗಳನ್ನು ನೀಡಬೇಕು. ನಮ್ಮ ದೇಶದಲ್ಲಿ ಸಹಕಾರ ರಂಗದಲ್ಲಿ ಕ್ಷೀರಕ್ರಾಂತಿ ಮಾಡಿದೆ. ಹಾಲು ಅತಿ ಹೆಚ್ಚು ಉತ್ಪಾದನೆ ಮಾಡುತ್ತಿದ್ದು, ನಂದಿನಿ ಹಾಲಿಗೆ ಹೆಚ್ಚು ಬೇಡಿಕೆ ಬರುವಂತೆ ಉತ್ಪಾದನೆ ಮಾಡತ್ತಿರುವುದು ತುಂಬಾ ಹೆಮ್ಮೆಯ ವಿಷಯ ಎಂದು ತಿಳಿಸಿದರು.

ಉತ್ತರಕರ್ನಾಟಕದಲ್ಲಿ ಒಂದು ಡಿಸಿಸಿ ಬ್ಯಾಂಕ್ ಮಾಡುವ ಕೆಲಸ ಒಂದು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಮಾಡುತ್ತಿದೆ. ನಮ್ಮಲ್ಲಿಯೂ ಸಹ ಸಹಕಾರ ಸಂಘಗಳು ಬಲಪ್ರದವಾಗಿಸಲು ಶ್ರಮಿಸಬೇಕು ಎಂದು ಆಶಿಸಿದರು. ಮಾನವೀಯ ದೃಷ್ಟಿಯಿಂದ ರೈತರಿಗೆ ಸಿಗುವ ಸೌಲಭ್ಯ ಒದಗಿಸಿ ಸಂಘಗಳನ್ನು ಅಭಿವೃದ್ಧಿ ಪಥದತ್ತ ಕೊಂಡೊಯ್ಯಬೇಕು ಎಂದು ತಿಳಿಸಿದರು.

ಮಾತೃಶ್ರೀ ಎನ್.ಮಂಜುನಾಥ್ ಮಾತನಾಡಿ ಈ ವರ್ಷ ಮಳೆ ಬರದೆ ತೀವ್ರವಾದ ಬರಗಾಲ ಅನುಭವಿಸುತ್ತಿದ್ದು, ಕುಡಿಯುವ ನೀರಿನ ಬವಣೆ ಜಾನುವಾರಗಳಿಗೆ ಮೇವು ಕೊರತೆ ಇದೆ ಇದನ್ನೆಲ್ಲ ನೀಗಿಸುವುದು ನಮ್ಮ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಭಾರತ ದೇಶದಲ್ಲಿ ಹೈನುಗಾರಿಕೆ ಉತ್ಪಾದನೆಯಲ್ಲಿ ನಮ್ಮ ಭಾರತ ದೇಶ ಮುಂಚೂಣಿಯಲ್ಲಿದೆ. ಅತೀ ಹೆಚ್ಚು ಹಾಲು ಉತ್ಪಾದನೆ ಮಾಡುತ್ತಿದ್ದೇವೆ. 9 ಲಕ್ಷ ಲೀಟರ್ ಹಾಲು ಉತ್ಪಾದನೆಯನ್ನು ಶಿವಮೊಗ್ಗ ಹಾಲು ಒಕ್ಕೂಟಕ್ಕೆ ನೀಡುತಿದ್ದೇವೆ ಎಂದು ತಿಳಿಸಿದರು.

ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಜೆ.ಶಿವಪ್ರಕಾಶ್ ಮಾತನಾಡಿ, 1902 ರಲ್ಲಿ ಪ್ರಪ್ರಥಮವಾಗಿ ಸಹಕಾರ ಚಳುವಳಿ ಪ್ರಾರಂಭವಾಯಿತು. 1953ರಲ್ಲಿ ಅಂದಿನ ಪ್ರಧಾನ ಮಂತ್ರಿಗಳಾದ ಜವಹಾರಲಾಲ್ ನೆಹರು ಅವರು ಸಹಕಾರರಂಗವನ್ನು ಪಂಚವಾರ್ಷಿಕ ಯೋಜನೆಯಲ್ಲಿ ಸೇರಿಸಿಕೊಂಡು ಸಹಕಾರಕ್ಷೇತ್ರವನ್ನು ಬಲಪಡಿಸಲು ಮುಂದಾದರು, ಅದೇ ರೀತಿ ಈಗಿನ ಪ್ರಧಾನ ಮಂತ್ರಿಗಳು ಸಹಕಾರ ಸಚಿವಾಲಯವನ್ನು ಮಾಡಿ ಇನ್ನು ಹೆಚ್ಚು ಬಲಪಡಿಸಲು ರೂ. 900 ಕೋಟಿ ಮೀಸಲಿಟ್ಟಿರುತ್ತಾರೆ. ಇದರಿಂದ ಸಹಕಾರಿರಂಗವನ್ನು ಬಲಪಡಿಸಿ ಸಾಮಾನ್ಯ ಜನರಿಗೆ ಆರ್ಥಿಕವಾಗಿ ಸಬಲರಾಗಿಸಲು ಹಾಗೂ ಸಾಲ ಸೌಲಭ್ಯ ನೀಡಲು ಸಹಕಾರಿಯಾಗಿದೆ ಎಂದರು.

ಮೊದಲು ಉಳ್ಳವರಿಗೆ ಮಾತ್ರ ಸಾಲ ಇನ್ನಿತರೆ ಸೌಲಭ್ಯ ಸಿಗುತ್ತಿತ್ತು, ಆದರೆ ಈಗ ಸಹಕಾರ ಕ್ಷೇತ್ರದ ಮೂಲಕ ಪ್ರತಿಯೊಬ್ಬ ರೈತರಿಗೂ ಇದರ ಸೌಲಭ್ಯ ಸಿಗುವಂತೆ ಮಾಡಿದೆ ಎಂದು ತಿಳಿಸಿದರು.

ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಹೆಚ್.ಎಂ.ದ್ಯಾಮಣ್ಣ, ಆಡಳಿತ ಮಂಡಳಿಯವರು ಬದ್ಧತೆ ಮತ್ತು ದಕ್ಷತೆಯಿಂದ ಕೆಲಸ ಮಾಡಬೇಕು. ಸಹಕಾರ ಸಂಘಗಳ ಸಾಲ ಪಡೆದು ಮತ್ತು ಮರು ಪಾವತಿ ಮಾಡಿದಾಗ ಮಾತ್ರ ಹೆಚ್ಚ ಸಾಲ ಬ್ಯಾಂಕ್ ನೀಡುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಯೂನಿಯನ್ ನಿರ್ದೇಶಕರಾದ ಜಿ.ಈ.ಅಜ್ಜಪ್ಪ, ಟಿ.ಮಹಂತೇಶ್, ಹಾಪ್‌ಕಾಮ್ಸ್ ಅಧ್ಯಕ್ಷ ಕೆ.ಎಂ.ತಿಪ್ಪೇಸ್ವಾಮಿ, ಸಹಕಾರ ಅಭಿವೃದ್ಧಿ ಅಧಿಕಾರಿ ಕೆ.ಕೃಷ್ಣಮೂರ್ತಿ, ಡಿಸಿಸಿ ಬ್ಯಾಂಕ್ ಮೇಲ್ವಿಚಾರಕರಾದ ಹೆಚ್.ಹಿಮಂತ್‌ರಾಜ್, ಶಂಕರಮೂರ್ತಿ, ಹಾಲು ವಿಸ್ತರಣಾಧಿಕಾರಿ ವಿನೂತ್ ಕುಮಾರ್, ಜಿಲ್ಲಾ ಸಹಕಾರ ಯೂನಿಯನ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ನಾಗರಾಜ್ ಪಾಟೀಲ್ ಇದ್ದರು. ಕಾರ್ಯಕ್ರಮದಲ್ಲಿ ಸುಮಾರು 200 ಜನ ಜಿಲ್ಲೆಯ ಸಹಕಾರ ಸಂಘಗಳ ಕಾರ್ಯದರ್ಶಿಗಳು, ಆಡಳಿತ ಮಂಡಳಿಯವರು, ಸಿಬ್ಬಂದಿಗಳು ಹಾಜರಿದ್ದರು.

# ತೆಲಂಗಾಣದಲ್ಲಿ ಕಾಂಗ್ರೆಸ್ ಅಧಿಕಾರ ಹಿಡಿಯುವತ್ತ ದಿಟ್ಟ ಹೆಜ್ಜೆ: ಸುಧಾಕರ್

» **ಚಳ್ಳಕೆರೆ**



ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷದ ಸರ್ಕಾರದ ಜನಪ್ರಿಯ ಆಡಳಿತ ಹಾಗೂ ಬಡ ಜನತೆ ಉದ್ಧಾರಕ್ಕಾಗಿ ರೂಪಿಸಿರುವ ಗ್ಯಾರಂಟಿಗಳು ಪಕ್ಷಕ್ಕೆ ಅಧಿಕಾರವನ್ನು ತಂದುಕೊಟ್ಟಿದ್ದಲ್ಲದೆ, ಇಡೀ ರಾಷ್ಟ್ರದಲ್ಲೇ ಸಂಚಲನ ಮೂಡಿಸಿದೆ. ತೆಲಂಗಾಣ ಚುನಾವಣೆಯಲ್ಲೂ ಸಹ ಕಾಂಗ್ರೆಸ್ ಪಕ್ಷ ಭರ್ಜರಿ ಜಯಭೇರಿ ಬಾರಿಸಲಿದೆ ಎಂದು ಉನ್ನತ ಶಿಕ್ಷಣ ಸಚಿವ ಸಿ.ಎಂ.ಸುಧಾಕರ್ ತಿಳಿಸಿದರು.

ಅವರು, ಆಂಧ್ರ ಪ್ರದೇಶದ ತೆಲಂಗಾಣ ಚುನಾವಣೆಯಲ್ಲಿ ಆಲಂಪುರ ಮತಕ್ಷೇತ್ರದಲ್ಲಿ ಚಳ್ಳಕೆರೆ ಕ್ಷೇತ್ರದ ಶಾಸಕ ಟಿ.ರಘುಮೂರ್ತಿಯರೊಂದಿಗೆ ಅಭ್ಯರ್ಥಿ ಡಾ.ಎಸ್.ಎ.ಸಂಪತ್‌ಕುಮಾರ್ ಪರ ಮತಯಾಚನೆ ಮಾಡಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ಅಭ್ಯರ್ಥಿ ಗೃಹ ಕಚೇರಿಯಲ್ಲಿಕಾಂಗ್ರೆಸ್‌ಪಕ್ಷದತತ್ವಸಿದ್ಧಾಂತಗಳನ್ನು ಒಪ್ಪಿ ಪಕ್ಷಕ್ಕೆ ಸೇರ್ಪಡೆಯಾದವರನ್ನು ಸ್ವಾಗತಿಸಿ ಮಾತನಾಡಿದ ಶಾಸಕ ಟಿ.ರಘುಮೂರ್ತಿ, ಚುನಾವಣೆ ಸಂದರ್ಭದಲ್ಲಿ ಯಾವ ಪಕ್ಷದ ಕಡೆಗೆ ಜನರ ಒಲವು ವ್ಯಕ್ತವಾಗುತ್ತದೆಯೋ ಆ ಪಕ್ಷ ಗೆಲುವು ಸಾಧಿಸಲಿದೆ. ಕಳೆದ ಆರು ತಿಂಗಳ ಕೆಳಗೆ ನಡೆದ ನನ್ನ ಚುನಾವಣೆಯಲ್ಲೂ ವಿವಿಧ ಪಕ್ಷದ ಕಾರ್ಯಕರ್ತರು, ನಾಯಕರು ಕಾಂಗ್ರೆಸ್ ಸೇರಿ ನನ್ನನ್ನು ಬೆಂಬಲಿಸಿದರು.

ಅದೇ ರೀತಿ ಈ ಕ್ಷೇತ್ರದಲ್ಲೂ ಅಭ್ಯರ್ಥಿ ಡಾ.ಎಸ್.ಎ.ಸಂಪತ್‌ಕುಮಾರ್ ಪರ ವಿವಿಧ ಪಕ್ಷದ ನಾಯಕರು ಕಾಂಗ್ರೆಸ್ ಸೇರ್ಪಡೆಯಾಗಿದ್ದಾರೆ. ಎಲ್ಲರೂ ಸಂಪತ್‌ಕುಮಾರ್‌ರವರನ್ನು ಚುನಾವಣೆಯಲ್ಲಿ ಗೆಲ್ಲಿಸಲೇಬೇಕೆಂಬ ಮಹತಾಂಕ್ಷೆಯಿಂದ ಪಕ್ಷಕ್ಕೆ ಸೇರ್ಪಡೆಯಾಗಿದ್ಧಾರೆ. ಎಲ್ಲರೂ ಸೇರಿ ಅವರ ವಿಜಯಕ್ಕೆ ಶ್ರಮಿಸೋಣ ಎಂದರು.

ಅಭ್ಯರ್ಥಿ ಸಂಪತ್‌ಕುಮಾರ್ ಮಾತನಾಡಿ, ದಿನದಿಂದ ದಿನಕ್ಕೆ ಚುನಾವಣೆ ಕಾವು ಹೆಚ್ಚುತ್ತಿದ್ದು, ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುವ ಶಕ್ತಿಗಳು ಹೆಚ್ಚುತ್ತಿವೆ. ನಿಮ್ಮೆಲ್ಲರ ಉತ್ಸಾಹ ನೋಡಿದರೆ ಈ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವು ಶೇ.100ಕ್ಕೆ 100 ಸತ್ಯ. ಚುನಾವಣೆಯಲ್ಲಿ ನಿಮ್ಮೆಲರ ಸಹಕಾರದಿಂದ ಈ ಕ್ಷೇತ್ರದ ಶಾಸಕನಾಗಿ ಜನತೆಯ ಪರವಾಗಿಸೇವೆ ಸಲ್ಲಿಸುವೆ. ನೀವು ಪಕ್ಷದ ಮೇಲೆ ಹಾಗೂ ನನ್ನ ಮೇಲಿಟ್ಟಿರುವ ಅಭಿಮಾನಕ್ಕೆ ನಾನು ಋಣಿಯಾಗಿದ್ದೇನೆಂದರು.

### ರಾಜ್ಯೋತ್ಸವ ಪ್ರಶಸ್ತಿ ಪ್ರತಿಯೊಬ್ಬ ಕಲಾವಿದನೂ ಹೆಮ್ಮೆ ಪಡುವ ವಿಷಯ



» **ಚಳ್ಳಕೆರೆ**

ಕಳೆದ ಸುಮಾರು ಐವತ್ತು ವರ್ಷಗಳಿಂದ ತಾಲ್ಲೂಕಿನ ರಂಗಭೂಮಿಯ ಸೇವೆಯಲ್ಲಿ ನಿರಂತರವಾಗಿ ತೊಡಗಿಕೊಂಡು ನೂರಾರು ನಾಟಕ ಪ್ರದರ್ಶನಗಳನ್ನು ನೀಡಿ, ನಾಟಕ ಪ್ರದರ್ಶನಗಳಿಗೆ ಸಂಗೀತ ನಿರ್ದೇಶನ ಮಾಡಿ ಸಾವಿರಾರು ಕಲಾವಿದರನ್ನು ರಂಗಭೂಮಿಯಲ್ಲಿ ತೊಡಗಿಕೊಳ್ಳುವಂತೆ ಮಾಡಿದ ಈ ನಾಡಿನ ಹೆಮ್ಮೆಯ ಹಿರಿಯ ರಂಗನಿರ್ದೇಶಕ ಪಿ.ತಿಪ್ಪೇಸ್ವಾಮಿಯವರಿಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡಿರುವುದು ಪ್ರತಿಯೊಬ್ಬ ಕಲಾವಿದನೂ ಸಂತಸ ಪಡುವ ವಿಷಯವಾಗಿದೆ ಎಂದು ಹಿರಿಯ ಪತ್ರಕರ್ತಸೊಂಡೆಕೆರೆ ಶಿವಣ್ಣ ತಿಳಿಸಿದರು. ಅವರು, ನಗರದ ತಿಪ್ಪೇಸ್ವಾಮಿಯವರ ನಿವಾಸಕ್ಕೆ ತೆರಳಿ ರಂಗಕಲಾವಿದರ ಪರವಾಗಿ ಅವರನ್ನು ಸನ್ಮಾನಿಸಿ, ಅಭಿನಂದಿಸಿ ಮಾತನಾಡಿದರು. ಕೇವಲ ಸಂಗೀತ, ನಾಟಕ ನಿರ್ದೇಶನವಲ್ಲದೆ ಅನೇಕ ಹೋರಾಟಗಳಲ್ಲೂ ಗುರುತಿಸಿಕೊಂಡಿರುವ ಅವರು ನಾಟಕ ಅಕಾಡೆಮಿಯ ಸದಸ್ಯರಾಗಿಯೂ ಸೇವೆ ಸಲ್ಲಿಸಿದ್ದಾರೆ. ವಿಶೇಷವಾಗಿ ಮ್ಯಾಸಬೇಡರ ಪಡೆ ಕುರಿತು ಅನೇಕ ಉಪಯುಕ್ತ ಮಾಹಿತಿಯನ್ನು ಲೇಖನದ ಮೂಲಕ ಪ್ರಕಟಿಸಿದ್ದಾರೆ.

## ಪ್ರಮುಖ ಸುದ್ದಿ

### ದಲಿತ ಸಮುದಾಯದ ಮೇಲೆ ನಡೆಯುವ ದೌರ್ಜನ್ಯಗಳ ನಿಯಂತ್ರಣಕ್ಕೆ ಪೊಲೀಸ್ ಇಲಾಖೆ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು

# ಕಾಟಾಚಾರದ ಸಭೆಯಿಂದ ದಲಿತ ಸಮುದಾಯಕ್ಕೆ ಹಿನ್ನೆಡೆ

» **ಚಳ್ಳಕೆರೆ**



ದಲಿತ ಸಮಸ್ಯೆಗಳನ್ನು ಆಲಿಸಿ ಸೂಕ್ತ ಪರಿಹಾರ ರೂಪಿಸುವುದಲ್ಲದೆ, ದಲಿತ ಸಮುದಾಯದ ಮೇಲೆ ನಡೆಯುವ ಯಾವುದೇ ದೌರ್ಜನ್ಯವನ್ನು ತಡೆಯುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಕಾರ್ಯನಿರ್ವಹಿಸುತ್ತಿದೆ. ದಲಿತ ಬಂಧುಗಳ ರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಎಂದು ಉಪವಿಭಾಗದ ಡಿವೈಎಸ್ಪಿ ಟಿ.ಬಿ.ರಾಜಣ್ಣ ತಿಳಿಸಿದರು.

ಅವರು, ಡಿವೈಎಸ್ಪಿ ಕಚೇರಿ ಆವರಣದಲ್ಲಿ ತಾಲ್ಲೂಕು ಮಟ್ಟದ ದಲಿತ ದಿನಾಚರಣಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಚಳ್ಳಕೆರೆ ತಾಲ್ಲೂಕಿನಾದ್ಯಂತ ದಲಿತ ಸಮುದಾಯ ಮೇಲೆ ನಡೆಯುವ ಅಹಿತಕರ ಘಟನೆಗಳನ್ನು ನಿಯಂತ್ರಿಸುವಲ್ಲಿ ಪೊಲೀಸ್ ಇಲಾಖೆ ಉತ್ತಮ ಹೆಜ್ಜೆ ಇಟ್ಟಿದೆ. ತಳಕು ಠಾಣಾ ವ್ಯಾಪ್ತಿಯಲ್ಲಿ ಕಳೆದ ಮೂರು ತಿಂಗಳ ಅವಧಿಯಲ್ಲಿ ಆರು ಪ್ರಕರಣಗಳು ದಾಖಲಾಗಿವೆ. ನಾಯನಹಟ್ಟಿ, ಪರಶುರಾಮಪುರ, ಚಳ್ಳಕೆರೆ ವ್ಯಾಪ್ತಿಯಲ್ಲಿ ಯಾವುದೇ ದಲಿತ ವಿರೋಧಿ ದೌರ್ಜನ್ಯ ಘಟನೆಗಳು ನಡೆದಿಲ್ಲ. ಕೆಲವೊಂದು ಸಣ್ಣಪಟ್ಟ ಘಟನೆಗಳಿಗೆ ಠಾಣೆಯಲ್ಲೇ ಕರೆಸಿ ವಿಚಾರಣೆ ನಡೆಸಿ ಎಚ್ಚರಿಕೆ ನೀಡಲಾಗಿದೆ. ಯಾವುದೇ ಪ್ರದೇಶದಲ್ಲಿ ದಲಿತ ಮೇಲೆ ದೌರ್ಜನ್ಯ ನಡೆದಲ್ಲಿ ಕೂಡಲೇ ಮಾಹಿತಿ ನೀಡಿದರೆ ಅಂತಹವರ ವಿರುದ್ದ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದರು.

ಬಿಎಸ್‌ಪಿ ಜಿಲ್ಲಾಧ್ಯಕ್ಷ ಪ್ರಕಾಶ್ ಮಾತನಾಡಿ, ಬೋಗನಹಳ್ಳಿ, ದೊಡ್ಡ ಉಳ್ಳಾರ್ತಿ, ವರವು ಮುಂತಾದ ಕಡೆಗಳಲ್ಲಿ ದೌರ್ಜನ್ಯ ಪ್ರಕರಣ ಹೆಚ್ಚುತ್ತಿರುವ ಬಗ್ಗೆ ಪೊಲೀಸ್ ಇಲಾಖೆ ಕಠಿಣ ಕ್ರಮ ಕೈಗೊಳ್ಳುವಲ್ಲಿ ವಿಫಲವಾಗಿದೆ. ಸಮಾಜ ಕಲ್ಯಾಣ ಇಲಾಖೆ, ತಹಶೀಲ್ದಾರ್ ಹಾಗೂ ಇನ್ನಿತರ ಅಧಿಕಾರಿಗಳು ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸುತ್ತಿಲ್ಲವೆಂದು ಆರೋಪಿಸಿದರು.

ದಲಿತ ಸಂಘರ್ಷ ಸಮಿತಿ ಸಂಚಾಲಕ ಟಿ.ವಿಜಯಕುಮಾರ್, ಕಳೆದ ಒಂದು ವರ್ಷದ ಹಿಂದೆ ಸಭೆ ಮಾಡಿದ್ದು, ಸಭೆಯಲ್ಲಿ ಕೈಗೊಂಡ ತೀರ್ಮಾನಗಳ ಅನುಷ್ಠಾನದ ಮಾಹಿತಿಯನ್ನು ಸಭೆಗೆ ನೀಡಬೇಕು. ಕೇವಲ ಕಾಟಚಾರಕ್ಕಾಗಿ ಸಭೆ ನಡೆಸಬಾರದು, ದಲಿತ ಮುಖಂಡರು ಪೊಲೀಸ್ ಠಾಣೆಗೆ ಭೇಟಿ ನೀಡಿದರೆ ಅಲ್ಲಿನ ಪೊಲೀಸ್ ಸಿಬ್ಬಂದಿ ಏಕವಚನದಲ್ಲೇ ನಮ್ಮನ್ನು ನಿಂದಿಸುತ್ತಾರೆ. ಆದ್ದರಿಂದ ಪೊಲೀಸ್ ಠಾಣೆಯಲ್ಲೇ ದಲಿತ ಮುಖಂಡರಿಗೆ ಗೌರವವಿಲ್ಲವೆಂದರೆ ಬೇರೆಯವರು ಹೇಗೆ ಕೊಡುತ್ತಾರೆಂದು ಪ್ರಶ್ನಿಸಿದರು.

ನನ್ನಿವಾಳ ನಾಗರಾಜು ಮಾತನಾಡಿ, ನನ್ನಿವಾಳದಲ್ಲಿ ಸಭೆ ನಡೆದಾಗ ಸಮಾಜ ಕಲ್ಯಾಣ ಇಲಾಖೆ, ತಹಶೀಲ್ಧಾರ್ ಗೈರು ಹಾಜರಾಗಿದ್ದರು. ಸಭೆಯಲ್ಲಿ ನಡೆಯುವ ಯಾವುದೇ ವಿಷಯ ಅನುಷ್ಠಾನವಾಗಲಿಲ್ಲ, ಇತ್ತೀಚಿನ ದಿನಗಳಲ್ಲಿ ದಲಿತ ಮೇಲೆ ದೌರ್ಜನ್ಯ ನಡೆಸಿದರೆ ಯಾವುದೇ ಕಾನೂನು ಕ್ರಮ ಜರುಗುವುದಿಲ್ಲವೆಂಬ ಭಾವನೆ ಮೂಡಿದ್ದು, ಈ ಬಗ್ಗೆ ಪೊಲೀಸ್ ಇಲಾಖೆ ಗಮನ ಹರಿಸಬೇಕು ಎಂದರು.

ಡಾ.ಡಿ.ಎನ್.ಮಂಜುನಾಥ ಮಾತನಾಡಿ, ದಲಿತರು, ಪರಿಶಿಷ್ಟ ಪಂಗಡಗಳ ಬಡ ಕುಟುಂಬಗಳ ಯುವಕರು ಹಾಗೂ ಮಹಿಳೆಯರನ್ನು ಆಮೀಷವೊಡ್ಡಿ ಮತಾಂತರ ಮಾಡುವ ಪ್ರಕರಣಗಳು ಹೆಚ್ಚುತ್ತಿವೆ. ಕೆಲವರನ್ನು ಕ್ರಿಶ್ಚಿಯನ್ ಹಾಗೂ ಮುಸ್ಲಿಂ ಧರ್ಮಕ್ಕೆ ಮತಾಂತರ ಮಾಡಲಾಗಿದೆ. ಮತಾಂತರಗೊಂಡ ದಲಿತರಿಗೆ ಸರ್ಕಾರದ ಸೌಲಭ್ಯಗಳನ್ನು ನೀಡುವುದು ಸರಿಯಲ್ಲ. ಈ ಬಗ್ಗೆ ಸರ್ಕಾರದೊಂದಿಗೆ ಚರ್ಚಿಸಿ ಮಾಹಿತಿ ನೀಡುವಂತೆ ಮನವಿ ಮಾಡಿದರು.

ದಲಿತ ಸಂಘಟನೆಯ ಭೀಮನಕೆರೆ ಶಿವಮೂರ್ತಿ, ವೈ.ಆನಂದಮೂರ್ತಿ, ಶಾಂತಕುಮಾರ್, ದ್ಯಾವರನಹಳ್ಳಿ ತಿಪ್ಪೇಸ್ವಾಮಿ, ಕಾಂತರಾಜು, ಡಿ.ಚಂದ್ರು ಮುಂತಾದವರು ಮಾತನಾಡಿದರು. ಪರಿಶಿಷ್ಟ ಪಂಗಡದ ಸಮುದಾಯದ ಪರವಾಗಿ ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಸಿ.ಟಿ.ಶ್ರೀನಿವಾಸ್, ನಿವೃತ್ತ ಶಿಕ್ಷಕ ಟಿ.ಸೂರನಾಯಕ ಮಾಹಿತಿ ನೀಡಿದರು. ಅಂತಿಮವಾಗಿ ಸಭೆಯಲ್ಲಿ ಕಳೆದ ವರ್ಷದ ಸಭೆಯ ತೀರ್ಮಾನಗಳ ಅನುಷ್ಠಾನ ಮಾಹಿತಿ ನೀಡಿ ಮುಂದಿನ ತಿಂಗಳು ಸಭೆ ನಡೆಸಲಾಗುವುದು ಎಂದರು.

## ಫಾಸ್ಟ್ ನ್ಯೂಸ್

### ಬಿ.ವೈ.ವಿಜಯೇಂದ್ರ ಆಯ್ಕೆಗೆ ಸಂತಸ

» **ಚಳ್ಳಕೆರೆ**

ಭಾರತೀಯ ಜನತಾ ಪಕ್ಷದ ಕರ್ನಾಟಕ ರಾಜ್ಯ ಘಟಕದ ಅಧ್ಯಕ್ಷರಾಗಿ ಶಿಕಾರಿಪುರ ಕ್ಷೇತ್ರದ ಶಾಸಕ, ಯುವ ಮುಖಂಡ, ಸಂಘಟನಾ ಚತುರ ಬಿ.ವೈ.ವಿಜಯೇಂದ್ರರವರನ್ನು ಆಯ್ಕೆ ಮಾಡಿದ ರಾಷ್ಟ್ರೀಯ ನಾಯಕರನ್ನು ಅಭಿನಂದಿಸುವುದಾಗಿ ಬಿಜೆಪಿ ಮಂಡಲ ಮಹಿಳಾ ಘಟಕದ ಅಧ್ಯಕ್ಷೆ ಇಂಧುಮತಿ ತಿಳಿಸಿದ್ದಾರೆ. ಅವರು, ಪತ್ರಿಕೆಯೊಂದಿಗೆ



ಮಾತನಾಡಿ, ಭಾರತೀಯ ಜನತಾ ಪಕ್ಷವನ್ನು ಅಧಿಕಾರ ತರುವ ನಿಟ್ಟಿನಲ್ಲಿ ಬಿಜೆಪಿ ವರಿಷ್ಠನಾಯಕರು ಬಿ.ವೈ.ವಿಜಯೇಂದ್ರರವರಿಗೆ ರಾಜ್ಯಾಧ್ಯಕ್ಷ ಸ್ಥಾನ ನೀಡಿದ್ದು ಸಂತಸ ತಂದಿದೆ. ಕಳೆದ ಎರಡು ವರ್ಷಗಳ ಹಿಂದೆ ನಡೆದ ಎರಡೂ ವಿಧಾನಸಭಾ ಉಪಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸುವಲ್ಲಿ ವಿಜಯೇಂದ್ರರವರ ಪಾತ್ರ ಹಿರಿದು. ಈ ಹಿನ್ನೆಲೆಯಲ್ಲಿ ರಾಜ್ಯ ಬಿಜೆಪಿ ವಿಜಯೇಂದ್ರರವರ ಸಾರಥ್ಯದಲ್ಲಿ ಉತ್ತಮ ಮುನ್ನಡೆ ಸಾಧಿಸಲಿದೆ ಎಂದರು.

### ಕಾಟವ್ವನಹಳ್ಳಿ ಓ.ನಾಗರಾಜುರವರಿಗೆ ಪಿಎಚ್‌ಡಿ ಪದವಿ ಘೋಷಣೆ

» **ಚಳ್ಳಕೆರೆ**

ತಾಲ್ಲೂಕಿನ ನಾಯಕನಹಟ್ಟಿ ಹೋಬಳಿಯ



ಕಾಟವ್ವನಹಳ್ಳಿಮಜಿರೆಗ್ರಾಮದ ದಾಸರಗಿಡ್ಡಯ್ಯನಹಟ್ಟಿಯ ಓ.ನಾಗರಾಜುರವರಿಗೆ ವಿಜಯ ನಗರ ಕೃಷ್ಣದೇವರಾಯ ವಿಶ್ವವಿದ್ಯಾಲಯದಿಂದ ಪಿಎಚ್‌ಡಿ ಪದವಿಯನ್ನು ಘೋಷಿಸಿದೆ. ಅರ್ಥಶಾಸ್ತ್ರ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಪಿ.ಎಸ್.ಶಶಿಧರ ಮಾರ್ಗದರ್ಶನದಲ್ಲಿ "ಎನ್ ಎಕಾನಾಮಿಕ್ ಆನಾಲಿಸಿಸ್ ಆಫ್ ಪಲ್ಸಸ್ ಪ್ರೊಡಕ್ಷನ್ ಅಂಡ್ ಮಾರ್ಕೆಟಿಂಗ್ ಇನ್ ಕರ್ನಾಟಕ " ಎಂಬ ವಿಷಯ ಕುರಿತು ಮಂಡಿಸಿದ ಮಹಾಪ್ರಬಂಧಕ್ಕೆ ಪಿಎಚ್‌ಡಿ ಪದವಿ ನೀಡಲಾಗಿದೆ. ಓ. ನಾಗರಾಜು ಕೆಎಲ್‌ಇ ಸಂಸ್ಥೆಯ ಜಗದ್ಗುರು ತೋಂಟದಾರ್ಯ ಮಹಾವಿದ್ಯಾಲಯದಲ್ಲಿ ಅರ್ಥಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

### ಕನಕ ಜಯಂತಿ : ನ.18 ರಂದು ಪೂರ್ವಭಾವಿ ಸಭೆ

» **ಚಿತ್ರದುರ್ಗ**

ಕನಕ ಜಯಂತಿಯನ್ನು ಜಿಲ್ಲಾ ಕೇಂದ್ರದಲ್ಲಿ ನ. 30 ರಂದು ಆಚರಿಸುವ ಸಂಬಂಧ ಅಗತ್ಯ ಪೂರ್ವ ಸಿದ್ಧತೆಗಳನ್ನು ಕೈಗೊಳ್ಳುವ ಬಗ್ಗೆ ಚರ್ಚಿಸಲು ಇದೇ ನ.18 ರಂದು ಮದ್ಯಾಹ್ನ 12 ಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದೆ. ಜಿಲ್ಲಾಧಿಕಾರಿ ದಿವ್ಯಪ್ರಭು ಜಿಆರ್‌ಜೆ ಸಭೆಯ ಅಧ್ಯಕ್ಷತೆ ವಹಿಸುವರು. ಎಲ್ಲ ಸಮಾಜದ ಮುಖಂಡರು ಸಭೆಯಲ್ಲಿ ಪಾಲ್ಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ ಕುಮಾರಸ್ವಾಮಿ ತಿಳಿಸಿದ್ದಾರೆ.

### ಮಡಿವಾಳ ಸಮಾಜದ ಹಿರಿಯ ಮುಖಂಡ ಮಂಜುನಾಥ ನಿಧನ

» **ಚಳ್ಳಕೆರೆ**

ಕಳೆದ ಹಲವಾರು ವರ್ಷಗಳಿಂದ ತ್ಯಾಗರಾಜ



ನಗರದಲ್ಲಿ ವಾಸವಿದ್ದ ಮಡಿವಾಳ ಸಮುದಾಯದ ಹಿರಿಯ ಮುಖಂಡ ಮಡಿವಾಳಮಂಜುನಾಥ (60)ತಮ್ಮ ಸ್ವಗೃಹದಲ್ಲಿ ಗುರುವಾರ ಬೆಳಗ್ಗೆ ನಿಧನರಾಗಿರುತ್ತಾರೆ. ಮೃತರು ಹೆಂಡತಿ, ಒರ್ವ ಪುತ್ರ, ಪುತ್ರಿ ಹಾಗೂ ಅಪಾರ ಬಂಧುಬಳಗವನ್ನು ಅಗಲಿದ್ದಾರೆ. ಮೃತ ಅಂತ್ಯಕ್ರಿಯೆ ಪಾವಗಡ ರಸ್ತೆಯ ಮುಕ್ತಿಧಾಮದಲ್ಲಿ ಸಂಜೆ ನಡೆಯಿತು.

### ಉದ್ಯಮಶೀಲತಾ ತರಬೇತಿ: ಅರ್ಜಿ

■ **ಚಿತ್ರದುರ್ಗ**

2023-24ನೇ ಸಾಲಿನಲ್ಲಿ ಕೌಶಲ್ಯಾಭಿವೃದ್ಧಿ ಇಲಾಖಾ ವ್ಯಾಪ್ತಿಯ ಸಿಡಾಕ್ ಸಂಸ್ಥೆಯ ಮೂಲಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಉದ್ಯಮಶೀಲತೆಯ ಬಗ್ಗೆ ಹತ್ತು ದಿನಗಳ ಉಚಿತ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ. ಅದರಂತೆ ಸಮಾಜ ಕಲ್ಯಾಣ ಇಲಾಖೆಯಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.ನ.30ಅರ್ಜಿಸಲ್ಲಿಸಲುಕೊನೆಯ ದಿನ. ಅರ್ಹಅಭ್ಯರ್ಥಿಗಳು https://www.scptsp.karnataka.gov.in/BMS/CDOC/EDPRegistrationfrom.aspx ಪೋರ್ಟಲ್ ಮೂಲಕ ನವೆಂಬರ್ 30 ರೊಳಗೆ ಅರ್ಜಿ ಸಲ್ಲಿಸಬೇಕು. ಆಯಾ ಜಿಲ್ಲಾ ಕೇಂದ್ರಗಳಲ್ಲಿ ಹತ್ತು ದಿನಗಳ ಉಚಿತ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ.

**ಅಲ್ಪಸಂಖ್ಯಾತರ ಸಮುದಾಯದ ಕುಂದುಕೊರತೆ ಸಭೆ**

# ಸರ್ಕಾರಿ ಯೋಜನೆಗಳ ಅರಿವು ಪಡೆದು, ಸದುಪಯೋಗಪಡಿಸಿಕೊಳ್ಳಿ: ಅಬ್ದುಲ್ ಅಜೀಮ್

» **ಚಿತ್ರದುರ್ಗ**

ಅಲ್ಪಸಂಖ್ಯಾತರ ಸಮುದಾಯದ ಏಳಿಗೆಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೊಳಿಸಿದ್ದು, ಅಲ್ಪಸಂಖ್ಯಾತರ ಸಮುದಾಯದವರು ಈ ಯೋಜನೆಗಳ ಅರಿವು ಪಡೆದು, ಯೋಜನೆಗಳ ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಅಬ್ದುಲ್ ಅಜೀಮ್ ಅವರು ಮನವಿ ಮಾಡಿದರು.



ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಹಜ್ ಮತ್ತು ವಕ್ಫ್ ಇಲಾಖೆ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವತಿಯಿಂದ ಗುರುವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಏರ್ಪಡಿಸಲಾದ ಅಲ್ಪಸಂಖ್ಯಾತರ ಸಮುದಾಯದವರ ಕುಂದುಕೊರತೆ ಸಭೆ ಉದ್ಘಾಟಿಸಿ ಅವರು ಮಾತನಾಡಿದರು.

ಚಿತ್ರದುರ್ಗ ಜಿಲ್ಲೆ ಶಾಂತಿಯುತ ಜಿಲ್ಲೆಯಾಗಿದ್ದು, ಇಲ್ಲಿ ಕೋಮು ಸೌಹಾರ್ದತೆ, ಕಾನೂನು ಸುವ್ಯವಸ್ಥೆ ಉತ್ತಮವಾಗಿದ್ದು, ಇಲ್ಲಿನ ಜನ ಶಾಂತಿಪ್ರಿಯರು, ಈ ಭಾಗದ ಜನರ ಸಂಸ್ಕೃತಿ, ಹಿರಿಯರ ಮಾರ್ಗದರ್ಶನವೇ ಶಾಂತಿ ಸೌಹಾರ್ದತೆಗೆ ಕಾರಣವಾಗಿದೆ ಎಂದು ಪ್ರಶಂಸಿದರು.

ಮುಸ್ಲಿಂ, ಕ್ರಿಶ್ಚಿಯನ್, ಸಿಖ್, ಜೈನ್, ಬೌದ್ಧ ಮತ್ತು ಪಾರ್ಸಿ ಸೇರಿದಂತೆ ಅಲ್ಪಸಂಖ್ಯಾತರ ಸಮುದಾಯವು ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಕ್ಷೇತ್ರಗಳಲ್ಲಿ ಹಿಂದುಳಿದಿದ್ದು, ಅವರ ಏಳಿಗೆಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದೆ. ಪ್ರಧಾನಮಂತ್ರಿಗಳ 15 ಅಂಶಗಳ ಕಾರ್ಯಕ್ರಮಗಳಡಿ, ವಿವಿಧ ಇಲಾಖೆಯಲ್ಲಿ ಜಾರಿಯಲ್ಲಿರುವ ಯೋಜನೆಗಳಲ್ಲಿ ಶೇ. 15 ರಷ್ಟು ಅಲ್ಪಸಂಖ್ಯಾತರ ವರ್ಗಕ್ಕೆ ನೀಡಬೇಕು ಎಂದಿದೆ. ಸಾಂವಿಧಾನಿಕ ಹಕ್ಕುಗಳಿಗೆ ಧಕ್ಕೆ ಉಂಟಾದಾಗ, ಅಲ್ಪಸಂಖ್ಯಾತರ ಆಯೋಗವು ಅವರ ರಕ್ಷಣೆಗೆ ನಿಲ್ಲುತ್ತದೆ, ಅಲ್ಪಸಂಖ್ಯಾತರಿಗೆ ದೊರಕಬೇಕಾದ ಸೌಲಭ್ಯಗಳನ್ನು ದೊರಕಿಸಲು ಕ್ರಮ ಕೈಗೊಳ್ಳುತ್ತದೆ ಎಂದರು.

ಕೆಲವೆಡೆ ಮತೀಯ ಗಲಭೆ ಸಂಭವಿಸಿದಾಗ ಆಯೋಗವೇ ಖುದ್ದು ತೆರಳಿ, ಸಾರ್ವಜನಿಕರು ಹಾಗೂ ಆಡಳಿತ ವರ್ಗದಿಂದ ಮಾಹಿತಿ ಪಡೆದು, ತಪ್ಪಿತಸ್ಥರಿಗೆ ಶಿಕ್ಷೆ ದೊರಕಿಸುವುದು ಹಾಗೂ ಅನ್ಯಾಯಕ್ಕೆ ಒಳಗಾದವರಿಗೆ ನ್ಯಾಯ ದೊರಕಿಸುವ ಪ್ರಯತ್ನ ಮಾಡುತ್ತದೆ. ಜೈಲಿನಲ್ಲಿಯೂ ಕೂಡ ಅಲ್ಪಸಂಖ್ಯಾತರ ವರ್ಗಕ್ಕೆ ನ್ಯಾಯ ದೊರಕಿಸಲು, ಸರ್ಕಾರಕ್ಕೆ ಕೆಲವು ಶಿಫಾರಸ್ಸು ಮಾಡುವ ಕಾರ್ಯವನ್ನು ಕೂಡ ಆಯೋಗ ಮಾಡುತ್ತಿದೆ. ಅಲ್ಪಸಂಖ್ಯಾತರ ಸಮುದಾಯದವರೇ ಹೆಚ್ಚಿರುವ ಕಾಲೋನಿಗಳಿಗೆ ಆಯೋಗ ಭೇಟಿ ನೀಡಿ, ಅಲ್ಲಿ ಕುಡಿಯುವ ನೀರು, ಚರಂಡಿ, ಆರೋಗ್ಯ ಸೇರಿದಂತೆ ಮೂಲಭೂತ ಸೌಕರ್ಯಗಳ ಬಗ್ಗೆ ಪರಿಶೀಲಿಸಿ, ಲೋಪದೋಷಗಳಿದ್ದಲ್ಲಿ ಸರಿಪಡಿಸುವ ಕಾರ್ಯ ಮಾಡುತ್ತಿದೆ. ಚರ್ಚ್, ಮಸೀದಿ, ಗುರುದ್ವಾರಗಳಿಗೆ ತೆರಳಿ, ಅಲ್ಲಿನ ಮುಖಂಡರೊಂದಿಗೆ ಮಾತನಾಡಿ, ಸಮುದಾಯದ ಅಭಿವೃದ್ಧಿಗೆ ಅಗತ್ಯವಿರುವ ಕಾರ್ಯಗಳ ಬಗ್ಗೆ ಸರ್ಕಾರಕ್ಕೆ ಶಿಫಾರಸು ಮಾಡುತ್ತಿದೆ. ಸರ್ಕಾರಿ ಯೋಜನೆಗಳು ದೊರಕದಿರುವುದು, ಆಡಳಿತ ವರ್ಗದಿಂದ ಅನ್ಯಾಯ ಆದಲ್ಲಿ ಅಥವಾ ಯಾವುದೇ ದೌರ್ಜನ್ಯಕ್ಕೆ ಒಳಗಾದ ಅಲ್ಪಸಂಖ್ಯಾತರ ವರ್ಗದವರು ನ್ಯಾಯಕ್ಕಾಗಿ ಆಯೋಗಕ್ಕೆ ನೇರವಾಗಿ ಅರ್ಜಿ ಸಲ್ಲಿಸಬಹುದು, ಆಯೋಗವೇ ನ್ಯಾಯಾಲಯದ ಮಾದರಿಯಲ್ಲಿ ವಿಚಾರಣೆ ನಡೆಸುವ ಅಧಿಕಾರ ಹೊಂದಿದೆ ಎಂದರು. ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡಿಕೆಯಲ್ಲಿ ತೊಂದರೆಯಾದ ಕಾರಣದಿಂದ ಆಯೋಗವೇ ಕೇಂದ್ರ ಸಚಿವರನ್ನು ಭೇಟಿಯಾಗಿ 48 ಕೋಟಿ ರೂ. ಅನುದಾನ ಬಿಡುಗಡೆ ಮಾಡಿಸಲು ಶ್ರಮಿಸಿದೆ. ಜಿಲ್ಲೆಗಳಲ್ಲಿ ವಕ್ಫ್ ಆಸ್ತಿಗಳ ರಕ್ಷಣೆ ಆಗಬೇಕು, ಒತ್ತುವರಿಗಳನ್ನು ತೆರವುಗೊಳಿಸುವ ಕಾರ್ಯ ಆಗಬೇಕು ಎಂದು ಆಯೋಗದ ಅಧ್ಯಕ್ಷರು ಹೇಳಿದರು.

ಜಿಲ್ಲಾಕೇಂದ್ರದಲ್ಲಿಸ್ಪರ್ಧಾತ್ಮಕಪರೀಕ್ಷೆಗಳಿಗೆ ತರಬೇತಿ : ಚಿತ್ರದುರ್ಗದ ಮಹಮದ್ ಫಯಾಜ್ ಅವರು ಮಾತನಾಡಿ, ಐಎಎಸ್, ಐಪಿಎಸ್ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ಪಡೆಯಲು ಅಲ್ಪಸಂಖ್ಯಾತರ ಸಮುದಾಯದವರು ಬೆಂಗಳೂರು ಅಥವಾ ದೆಹಲಿ ಮುಂತಾದೆಡೆ ತೆರಳಬೇಕು, ಆದರೆ ಆರ್ಥಿಕವಾಗಿ ಹಿಂದುಳಿದ ನಮ್ಮ ಸಮುದಾಯಕ್ಕೆ ಇದು ಕಷ್ಟಕರವಾಗಿದೆ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಆಯೋಗದ ಅಧ್ಯಕ್ಷರು, ಇದು ಉತ್ತಮ ಬೇಡಿಕೆಯಾಗಿದ್ದು, ಜಿಲ್ಲೆಯ ಪ್ರತಿಭಾನ್ವಿತ 25 ರಿಂದ 35 ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ಜಿಲ್ಲಾ ಕೇಂದ್ರದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗೆ ವಸತಿ ಸಹಿತ ತರಬೇತಿ ನೀಡಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ಶಿಫಾರಸು ಮಾಡಲಾಗುವುದು. ಬೆಂಗಳೂರಿನ ವಕ್ಫ್ ಭವನದಲ್ಲಿ ಸುಮಾರು 800 ವಿದ್ಯಾರ್ಥಿಗಳಿಗೆ ವಸತಿ ಸಹಿತ ಸ್ಪರ್ಧಾತ್ಮಕ ಪರೀಕ್ಷೆಗೆ ತರಬೇತಿಗೆ ಅವಕಾಶ ಮಾಡಿಕೊಡಲಾಗಿದೆ ಎಂದರು.

ಅಲ್ಪಸಂಖ್ಯಾತರ ಸಮುದಾಯದ ವಿವಿಧ ಸಾರ್ವಜನಿಕರು ಕುಂದುಕೊರತೆ ಸಭೆಯಲ್ಲಿ ಮನವಿ ಸಲ್ಲಿಸಿದರು. ಚಿತ್ರದುರ್ಗದ ಹೋಲಿ ಫ್ಯಾಮಿಲಿ ಚರ್ಚ್‌ನ ಫಾದರ್ ಕ್ಲಾರೆನ್ಸ್ ಡಯಾಸ್ ಅವರು ಮಾತನಾಡಿ, ತಮ್ಮ ಚರ್ಚ್ ನವೀಕರಣಕ್ಕೆ 30 ಲಕ್ಷ ರೂ. ಅನುದಾನ ಮಂಜೂರಾಗಿತ್ತು, ಇದರಲ್ಲಿ 22.5 ಲಕ್ಷ ರೂ. ಬಿಡುಗಡೆಯಾಗಿದ್ದು, ಬಾಕಿ ಇರುವ 7.5 ಲಕ್ಷ ರೂ. ಅನುದಾನ ಬಿಡುಗಡೆಗೆ ವಿಳಂಬವಾಗುತ್ತಿದೆ, ಈ ಬಗ್ಗೆ ಆಯೋಗವು ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಿದರು. ಅಲ್ಪಸಂಖ್ಯಾತರ ಸಮುದಾಯದ ಬೀದಿ ಬದಿ ವ್ಯಾಪಾರಿಗಳಿಗೆ ಬ್ಯಾಂಕ್‌ನವರು ಸಾಲ ಸೌಲಭ್ಯ ನೀಡುತ್ತಿಲ್ಲ, ಸಿಬಿಲ್ ಸ್ಕೋರ್, ಐಟಿ ರಿಟರ್ನ್ಸ್ ಸೇರಿದಂತೆ ವಿವಿಧ ನೆಪಗೊಳೊಡ್ಡಿ ಅರ್ಜಿ ತಿರಸ್ಕರಿಸುತ್ತಿದ್ದಾರೆ. ಇಲಾಖೆಗಳಿಂದ ಮಂಜೂರಾತಿ ದೊರೆತರೂ ಬ್ಯಾಂಕ್‌ಗಳು ಸಾಲ ನೀಡುತ್ತಿಲ್ಲ ಎಂದು ಕೆಲವರು ದೂರಿದರು, ಪ್ರತಿಕ್ರಿಯಿಸಿದ ಆಯೋಗದ ಕಾರ್ಯದರ್ಶಿ ಸಲ್ಮಾ ಫಿರ್ದೋಸ್ ಅವರು, 03 ಲಕ್ಷ ರೂ. ಗಳವರೆಗಿನ ಸಾಲಕ್ಕೆ ಬ್ಯಾಂಕ್‌ಗಳು ಸಿಬಿಲ್ ಸ್ಕೋರ್ ಪರಿಗಣಿಸಬಾರದು ಎಂದು ಈಗಾಗಲೆ ಸರ್ಕಾರ ಸ್ಪಷ್ಟವಾಗಿ ಸುತ್ತೋಲೆ ಹೊರಡಿಸಿದೆ, ಬಾಧಿತರು ಆಯೋಗಕ್ಕೆ ದೂರು ಸಲ್ಲಿಸಬಹುದು ಎಂದರು.

ಹೊಸದುರ್ಗದ ಜಾಫರ್ ಸಾದಿಕ್ ಮಾತನಾಡಿ, ಹೊಸದುರ್ಗದಲ್ಲಿ ಹೊಸದಾಗಿ ಸ್ಮಶಾನ ಮಂಜೂರಾಗಿದ್ದು, ಆದರೆ ಸಮುದಾಯದ ಉಪಯೋಗಕ್ಕೆ ಇನ್ನೂ ದೊರಕಿಲ್ಲ, ಪ್ರತಿ ತಾಲ್ಲೂಕಿಗೂ ಒಂದು ಮೌಲಾನಾ ಆಜಾದ್ ಸ್ಕೂಲ್ ಪ್ರಾರಂಭಿಸಬೇಕು ಎಂದು ಮನವಿ ಮಾಡಿದರು. ಪ್ರತಿಕ್ರಿಯಿಸಿದ ಆಯೋಗದ ಅಧ್ಯಕ್ಷರು ಸ್ಮಶಾನ ಇಲ್ಲದ ಗ್ರಾಮ ಅಥವಾ ಪಟ್ಟಣಗಳಿಗೆ ಆದ್ಯತೆ ಮೇರೆಗೆ ಸ್ಮಶಾನ ನೀಡಬೇಕು ಎಂದು ಈಗಾಗಲೆ ಸರ್ಕಾರ ಸ್ಪಷ್ಟ ಸೂಚನೆ ನೀಡಿದೆ, ಒಂದು ವೇಳೆ ಸ್ಮಶಾನಕ್ಕೆ ಸ್ಥಳ ಇಲ್ಲದವರು ಆಯಾ ತಹಸಿಲ್ದಾರರಿಗೆ ಅರ್ಜಿ ಸಲ್ಲಿಸಬೇಕು. ಸ್ಮಶಾನಕ್ಕೆ ಜಾಗ ದೊರಕದಿದ್ದಲ್ಲಿ ಆಯೋಗಕ್ಕೆ ಅರ್ಜಿ ಸಲ್ಲಿಸಬಹುದು, ಆಯೋಗವು ವಿಚಾರಣೆ ನಡೆಸಿ ಕ್ರಮ ಕೈಗೊಳ್ಳಲಿದೆ ಎಂದರು.

ಸಭೆಯಲ್ಲಿ ಶಾದಿ ಮಹಲ್, ಶಾಲೆಗಳು, ವಿದ್ಯಾರ್ಥಿ ವೇತನ ಬಿಡುಗಡೆ, ವಕೀಲರಿಗೆ ಶಿಷ್ಯ ವೇತನ, ಪಿಂಜಾರ ಅಭಿವೃದ್ಧಿ ನಿಗಮ ಸ್ಥಾಪನೆ, ಕ್ರಿಶ್ಚಿಯನ್ ಪವಿತ್ರ ಸ್ಥಳಕ್ಕೆ ಯಾತ್ರೆ ಕೈಗೊಳ್ಳಲು ಸಹಾಯಧನ ಸೇರಿದಂತೆ ವಿವಿಧ ಬೇಡಿಕೆಗಳಿಗೆ ಸಂಬಂಧಿದ ಮನವಿಗಳು ಸಲ್ಲಿಕೆಯಾದವು.

ಸಭೆಯಲ್ಲಿ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಕಾರ್ಯದರ್ಶಿ ಸಲ್ಮಾ ಫಿರ್ದೋಸ್, ಆಯೋಗದ ಉಪನಿರ್ದೇಶಕ ರಘುನಾಥ್, ವಿಶೇಷ ಕರ್ತವ್ಯಾಧಿಕಾರಿ ಮುಜೀಬುಲ್ಲಾ ಜಫಾರಿ, ಜಿ.ಪಂ. ಯೋಜನಾ ನಿರ್ದೇಶಕ ಡಾ. ರಂಗಸ್ವಾಮಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಕಾಂತರಾಜ್ ಸೇರಿದಂತೆ ವಿವಿಧ ಸಮುದಾಯದ ಮುಖಂಡರಾದ ತಾಜ್‌ಪೀರ್, ಕ್ಲಾರೆನ್ಸ್ ಡಯಾಸ್, ಅಬ್ದುಲ್ ಬಷೀರ್, ಅಬ್ದುಲ್ ರೆಹಮಾನ್ ಮುಂತಾದವರು ಉಪಸ್ಥಿತರಿದ್ದರು.

**ವಿಕಲಾಂಗ ಮಕ್ಕಳಿಗೆ ಆತ್ಮಸ್ಥೈರ್ಯ ತುಂಬುವ ಕೆಲಸ ನಿರಂತರವಾಗಿ ಆಗಬೇಕು: ಕೆ.ನಾಗೇಶ್**

## ಸಂಕುಚಿತ ಭಾವನೆ ಉಂಟಾಗದಂತೆ ಜಾಗ್ರತೆ ವಹಿಸಿ

» **ಚಳ್ಳಕೆರೆ**

ಮಕ್ಕಳಲ್ಲಿ ಮುಗ್ಧತೆ ಹೆಚ್ಚು, ಅವರಿಗೆ ಸರಿಯಾದ ರೀತಿಯಲ್ಲಿ ಶಿಕ್ಷಣ ಹಾಗೂ ಇನ್ನಿತರ ಸೌಲಭ್ಯಗಳನ್ನು ಒದಗಿಸಿದಲ್ಲಿ ಅವರು ಮುಂದೆ ಬರಲು ಸಾಧ್ಯವಾಗುತ್ತದೆ. ಶಾಲಾ ಹಂತದಲ್ಲೇ ಮಕ್ಕಳಲ್ಲಿನ ಸಂಕುಚಿತ ಭಾವನೆಯನ್ನು ಹೊರಗಿಡುವ ಪ್ರಯತ್ನವನ್ನು ಮಾಡಬೇಕು. ಮಕ್ಕಳ ಯೋಗಕ್ಷೇಮಕ್ಕೆ ಮೊದಲ ಆದ್ಯತೆ ನೀಡಬೇಕೆಂದು ರೋಟರಿ ಕ್ಲಬ್ ಅಧ್ಯಕ್ಷ ಕೆ.ನಾಗೇಶ್ ತಿಳಿಸಿದರು.




ಅವರು, ವೆಂಕಟೇಶ್ವರ ನಗರದ ಬೆಳಕು ಅಂದರ ಶಾಲೆಯಲ್ಲಿ ಮಕ್ಕಳ ದಿನಾಚರಣೆ ಅಂಗನವಾಗಿ ರೋಟರಿ ಕ್ಲಬ್ ವತಿಯಿಂದ ಶಾಲಾ ಮಕ್ಕಳಿಗೆ ಸಿಹಿ, ಹಣ್ಣು, ಹಾಲು ವಿತರಿಸಿ ಮಾತನಾಡಿದರು. ಮಕ್ಕಳ ದಿನಾಚರಣೆ ಆಚರಣೆ ಹೆಚ್ಚು ಸಂತೋಷವನ್ನು ತರುತ್ತದೆ. ಈ ಕಾರ್ಯಕ್ರಮವನ್ನು ಇಲ್ಲಿನ ಮಕ್ಕಳೊಂದಿಗೆ ಆಚರಿಸಿದ್ದು ಸಂತಸ ತಂದಿದೆ ಎಂದರು. ಡಾ.ಎಲ್.ಎಸ್.ವೀರೇಶ್ ಮಾತನಾಡಿ, ಯಾವುದೇ ಹಂತದಲ್ಲಾಗಲಿ ಮಕ್ಕಳು ತಾವು ಅಸಮರ್ಥರು ಎಂಬುವುದನ್ನು ಒಪ್ಪದೆ ಸವಾಲುಗಳು ಬಂದರೂ ಅವುಗಳನ್ನು ಎದುರಿಸಿ ಸಮರ್ಥರಾಗುವತ್ತ ಹೆಜ್ಜೆ ಇಡಬೇಕು. ವಿಶೇಷವಾಗಿ ಅಂಗವಿಕಲತೆ ಹೊಂದಿದ ಮಕ್ಕಳಿಗೆ ಸಂಕುಚಿತ ಭಾವನೆ ಹೆಚ್ಚು, ನಮ್ಮನ್ನು ಅಲಕ್ಷಿಸುತ್ತಿದ್ದಾರೆಂಬ ಭಾವನೆ ಅವರಲ್ಲಿ ಉಂಟಾಗದಂತೆ ಎಲ್ಲರೂ ಜಾಗ್ರತೆ ವಹಿಸಬೇಕು ಎಂದರು. ಶಾಲೆಯ ಮುಖ್ಯೋಪಾಧ್ಯಾಯ ಮಂಜುನಾಥ, ಗಣ್ಯರ ಮಾತುಗಳನ್ನು ಮಕ್ಕಳಿಗೆ ಅರ್ಥವಾಗುವಂತೆ ಸನ್ನೆಮೂಲಕ ವಿವರಿಸಿದರು.

## ಮೈಲನಹಳ್ಳಿ: ಗೌರಿ ಉತ್ಸವ ಸಂಭ್ರಮ



**ಚಳ್ಳಕೆರೆ:** ತಾಲ್ಲೂಕಿನ ಗಡಿಭಾಗದಲ್ಲಿರುವ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮೈಲನಹಳ್ಳಿ ಗ್ರಾಮದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ದೀಪಾವಳಿ ಹಬ್ಬದ ಪ್ರಯುಕ್ತ ನೋಪಿ ಗೌರಿ ಹಬ್ಬವನ್ನು ಸಂಭ್ರಮ, ಸಡಗರಗಳಿಂದ ಆಚರಿಸಲಾಯಿತು. ಅಮವಾಸೆಯ ದಿನದಂತೆ ಗ್ರಾಮದಲ್ಲಿ ಎಲ್ಲಾ ಮಹಿಳೆಯರು ತಮ್ಮ ಮನೆಗಳನ್ನು ಸ್ವಚ್ಛಗೊಳಿಸಿ, ತಳಿರುತೋರಣ ಹೂಗಳಿಂದ ಅಲಂಕರಿಸಿ ನೋಪಿ ಗೌರಿಯನ್ನು ಕಳಸದೊಂದಿಗೆ ಪ್ರತಿಷ್ಠಾಪಿಸಿ ಒಡವೆ, ವಸ್ತ್ರ ಹೂಗಳಿಂದ ಸಿಂಗಾರಿ ಇಡೀ ಕುಟುಂಬವೇ ಈ ಹಬ್ಬದಲ್ಲಿ ಪಾಲ್ಗೊಂಡು ಪೂಜೆ ಕಾರ್ಯಗಳನ್ನು ನೆರವೇರಿಸುವರು.

**ಪ್ರಮುಖ ಸುದ್ದಿ**

**ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಅಬ್ದುಲ್ ಅಜೀಮ್ ಸೂಚನೆ**

# ಪ್ರಧಾನಮಂತ್ರಿ 15 ಅಂಶ ಕಾರ್ಯಕ್ರಮ ಸಮರ್ಪಕ ಅನುಷ್ಠಾನಗೊಳಿಸಿ

» **ಚಿತ್ರದುರ್ಗ**

ಅಲ್ಪಸಂಖ್ಯಾತರ ಏಳಿಗೆಗಾಗಿ ರೂಪಿಸಲಾಗಿರುವ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು ಎಂದು ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಅಬ್ದುಲ್ ಅಜೀಮ್ ಅಧಿಕಾರಿಗಳಿಗೆ ಸೂಚನೆ ನೀಡಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿರುವ ಉರ್ದು ಶಾಲೆಗಳಿಗೆ ಭೇಟಿ ನೀಡಿ, ದುರಸ್ಥಿ ಕಾರ್ಯಕೈಗೊಳ್ಳಬೇಕಾದ ವಿವಿಧ ಶಾಲೆಗಳ ಕೊಠಡಿಗಳನ್ನು ಪರಿಶೀಲನೆ ನಡೆಸಿ, ದುರಸ್ತಿಗೆ ಕ್ರಮವಹಿಸಬೇಕು. ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಶಾಲೆಗಳಿಗೆ ನಿವೇಶನ ಗುರುತಿಸಿ, ಶಾಲೆಗಳ ನಿರ್ಮಾಣಕ್ಕೆ ಅಗತ್ಯ ಕ್ರಮಕೈಗೊಳ್ಳಬೇಕು ಎಂದು ಶಾಲಾ ಶಿಕ್ಷಣ ಇಲಾಖೆ ಅಧಿಕಾರಿಗೆ ಸೂಚನೆ ನೀಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಡಿಎಂಎಫ್ ಹಾಗೂ ಕೆಎಂಇಆರ್‌ಸಿ ಅನುದಾನದಲ್ಲಿ ಶಾಲೆ ಕೊಠಡಿಗಳ ನಿರ್ಮಾಣಕ್ಕೆ ಅಗತ್ಯ ಕ್ರಮಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ತೀವ್ರ ಅಸಮಾಧಾನ : ಅಲ್ಪಸಂಖ್ಯಾತರ ಸಮುದಾಯದವರಿಗೆ ಸಾಲ ಸೌಲಭ್ಯ ನೀಡಿಕೆಯಲ್ಲಿ ಬ್ಯಾಂಕ್‌ಗಳು ತೀವ್ರ ನಿರ್ಲಕ್ಷ್ಯ ತಾಳುತ್ತಿರುವ ಬಗ್ಗೆ ವ್ಯಾಪಕ ದೂರುಗಳು ಆಯೋಗಕ್ಕೆ ಬರುತ್ತಿವೆ. ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಸಮುದಾಯಕ್ಕೆ ಎಷ್ಟು ಫಲಾನುಭವಿಗಳಿಗೆ ಸಾಲ ಸೌಲಭ್ಯ ನೀಡಲಾಗಿದೆ ಎಂದು ಆಯೋಗದ ಅಧ್ಯಕ್ಷರು ಲೀಡ್ ಬ್ಯಾಂಕ್ ವ್ಯವಸ್ಥಾಪಕರಿಗೆ ಪ್ರಶ್ನಿಸಿದರು, ಉತ್ತರಿಸಿದ ಲೀಡ್ ಬ್ಯಾಂಕ್ ವ್ಯವಸ್ಥಾಪಕ ತಿಪ್ಪೇಶ್ ಅವರು, ಅರ್ಜಿಗಳು ತಿರಸ್ಕೃತಗೊಂಡಿರುವ ಬಗ್ಗೆ ನಿರ್ದಿಷ್ಟ ಪ್ರಕರಣಗಳಿದ್ದಲ್ಲಿ, ಪರಿಶೀಲಿಸಲಾಗುವುದು ಎಂದು ಉತ್ತರಿಸಿದರು, ಇದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಆಯೋಗದ ಅಧ್ಯಕ್ಷರು, ಅಲ್ಪಸಂಖ್ಯಾತರರಿಗೆ ಸಾಲ ಸೌಲಭ್ಯ ಮಂಜೂರಾತಿ ಅಥವಾ ತಿರಸ್ಕೃತವಾಗಿರುವ ಬಗ್ಗೆ ಯಾವುದೇ ಮಾಹಿತಿಯನ್ನು ಸಭೆಗೆ ತಂದಿಲ್ಲ, ಬದಲಿಗೆ ಮಾಹಿತಿ ನೀಡುವಂತೆ ನಮಗೇ ಕೇಳುತ್ತೀರಿ ಎಂದು ಲೀಡ್ ಬ್ಯಾಂಕ್ ಅಧಿಕಾರಿಗಳ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಜಾರಿಗೊಳಿಸಲಾಗಿರುವ ಅರಿವು ಸಾಲ, ಶ್ರಮಶಕ್ತಿ ಯೋಜನೆ, ಸ್ವಯಂ ಉದ್ಯೋಗ ಯೋಜನೆ, ಗಂಗಾ ಕಲ್ಯಾಣ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆಯಡಿ ಫಲಾನುಭವಿಗಳನ್ನು ಆಯ್ಕೆಮಾಡಿಅಲ್ಪಸಂಖ್ಯಾತಸಮುದಾಯದ ಅಭಿವೃದ್ಧಿಗೆ ಕ್ರಮವಹಿಸಬೇಕು ಎಂದು ಹೇಳಿದರು.

ಬೃಹತ್ ಉದ್ಯೋಗ ಮೇಳ ಆಯೋಜಿಸಿ: ಜಿಲ್ಲೆಯಲ್ಲಿರುವ ಯುವ ಜನತೆ ಉದ್ಯೋಗ ಕಲ್ಪಿಸುವ ನಿಟ್ಟಿನಲ್ಲಿ ಬೃಹತ್ ಉದ್ಯೋಗ ಮೇಳ ಆಯೋಜಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಉದ್ಯೋಗಾಧಿಕಾರಿಗೆ ಸೂಚನೆ ನೀಡಿದರು.

ಕೊಳಗೇರಿ ಪ್ರದೇಶದ ಜನರಿಗೆ ಮೂಲಸೌಕರ್ಯ ಕಲ್ಪಿಸಿ: ಕೊಳಗೇರಿ ಪ್ರದೇಶದಲ್ಲಿ ವಾಸಿಸುವ ಜನರಿಗೆ ರಸ್ತೆ, ನೀರು, ವಿದ್ಯುತ್, ನಿವೇಶನ, ಮನೆ ಸೇರಿದಂತೆ ಅಗತ್ಯ ಮೂಲ ಸೌಕರ್ಯ ಒದಗಿಸಬೇಕು ಎಂದು ಅಲ್ಪಸಂಖ್ಯಾತ ಆಯೋಗದ ಅಧ್ಯಕ್ಷ ಅಬ್ದುಲ್ ಅಜೀಮ್ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಅಧಿಕಾರಿಗೆ ಸೂಚನೆ ನೀಡಿದರು.

ಕೊಳಚೆ ಪ್ರದೇಶ ಅಭಿವೃದ್ಧಿಗೆ ಸಂಬಂಧಿಸಿದಂತೆ ಚಿತ್ರದುರ್ಗ ಜಿಲ್ಲೆಗೆ 5843 ಮನೆಗಳು ಮಂಜೂರಾಗಿದ್ದು, ಇದರಲ್ಲಿ 3469 ಮನೆಗಳ ನಿರ್ಮಾಣಕ್ಕೆ ಕ್ರಮವಹಿಸಲಾಗಿದೆ ಎಂದು ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ಅಧಿಕಾರಿಗೆ ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ರಾಜ್ಯ ಅಲ್ಪಸಂಖ್ಯಾತರ ಆಯೋಗದ ಕಾರ್ಯದರ್ಶಿ ಸಲ್ಮಾ ಫಿರ್ದೋಸ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಆಯೋಗದ ಉಪನಿರ್ದೇಶಕ ರಘುನಾಥ್, ವಿಶೇಷ ಕರ್ತವ್ಯಾಧಿಕಾರಿ ಮುಜೀಬುಲ್ಲಾ ಜಫಾರಿ, ಜಿ.ಪಂ. ಯೋಜನಾ ನಿರ್ದೇಶಕ ಡಾ. ರಂಗಸ್ವಾಮಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಕಾಂತರಾಜ್, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಧಿಕಾರಿ ಚಿದಾನಂದ್, ಜಿಲ್ಲಾ ವಕ್ಫ್ ಅಧಿಕಾರಿ ನೂರ್ ಬಾಷಾ ನಾಮನಿರ್ದೇಶಿತ ಸದಸ್ಯರುಗಳಾದ ಫಾರುಕ್ ಉಲ್ಲಾ, ಎಸ್.ಶ್ರೀನಿಕ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

## ಫಾಸ್ಟ್ ನ್ಯೂಸ್

### ತಳಕು ಗ್ರಾಪಂಗೆ ಪಿಡಿಓ ನೇಮಕಕ್ಕೆ ಆಗ್ರಹ



» **ಚಿತ್ರದುರ್ಗ**
ಚಳ್ಳಕೆರೆ ತಾಲ್ಲೂಕು, ತಳಕು ಗ್ರಾಮಪಂಚಾಯಿತಿಗೆ ಖಾಯಂ ಪಿಡಿಓ ಒಬ್ಬರನ್ನು ನೇಮಕಮಾಡುವಂತೆ ಗ್ರಾಮಪಂಚಾಯಿತಿಯ ಸದಸ್ಯರು ಆಗ್ರಹಿಸಿದ್ದಾರೆ. ತಳಕು ಗ್ರಾಮಪಂಚಾಯಿತಿ ಎ ಗ್ರೇಡ್ ಪಂಚಾಯಿತಿಯಾಗಿದ್ದು, ಆರ್‌ಡಿಪಿಆರ್ ಇಲಾಖೆಯಿಂದ ಅನುಮೋದನೆಗೊಂಡಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯನ್ನು ನೇಮಕಮಾಡುವ ಜಾಗದಲ್ಲಿ ಗ್ರೇಡ್–1 ಕಾರ್ಯದರ್ಶಿಯನ್ನು ನಿಯೋಜನೆಮಾಡಿದ್ದು, ಇದರಿಂದ ತಳಕು ಗ್ರಾಮಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಅಭಿವೃದ್ಧಿ ಕೆಲಸಗಳು ಕುಂಠಿತವಾಗಿದೆ ಎಂದು ಗ್ರಾಮಪಂಚಾಯಿತಿ ಸದಸ್ಯರು ದೂರಿದ್ದಾರೆ. ಕಳೆದು ಮೂರ್‍ನಾಲ್ಕು ತಿಂಗಳ ಅವಧಿಯಲ್ಲಿ ಸುಮಾರು 9 ಜನ ಎ–ಗ್ರೇಡ್ ಸೆಕ್ರೇಟರಿಗಳು ಬಂದು ಹೋಗಿದ್ದು, ಬರಿ ಬಂದು–ಹೋಗುವವರ ಕಥೆಯಾಗಿದೆ. ಆದರೆ ಇದುವರೆಗೂ ಯಾವುದೇ ಅಭಿವೃದ್ಧಿ ಕಾರ್ಯಗಳು ಆಗದೇ ಕುಂಠಿತವಾಗಿದೆ ಎಂದು ಆರೋಪಿಸಿದ್ದಾರೆ.ತಳಕು ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ಒಂದು ಗ್ರಾಮಕ್ಕೆ ಸುಮಾರು ನಾಲ್ಕರಿಂದ ಐದು ಮಜುರೆ ಗ್ರಾಮಗಳು ಬಂದು ಸೇರುತ್ತವೆ. ಒಟ್ಟಾರೆ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ಸಂಖ್ಯೆ 26–27 ಹಳ್ಳಿಗಳಿದ್ದು, ಈ ಗ್ರಾಮಗಳಿಗೆ ಸಂಪೂರ್ಣವಾದ ಸಮಯಕೊಟ್ಟು ಅಭಿವೃದ್ಧಿ ಪಡಿಸುವಲ್ಲಿ ಈಗ ಹಾಲಿ ಇರುವ ಗ್ರೇಡ್–1 ಕಾರ್ಯದರ್ಶಿ ವಿಫಲರಾಗಿದ್ದು, ಹಾಗೆಯೇ ಇವರೇ ಮತ್ತೊಂದು ಗ್ರಾಮಪಂಚಾಯಿತಿಗೂ ಚಾರ್ಜ್ ಇರುವುದರಿಂದ ಎರಡೂಗ್ರಾಮಪಂಚಾಯಿತಿಗಳನ್ನುಸರಿದೂಗಿಸಲು ಸಾಧ್ಯವಾಗುತ್ತಿಲ್ಲ ಎಂದು ಈಗಾಗಲೇ ಜಿಲ್ಲಾ ಪಂಚಾಯಿತಿಯ ಮುಖ್ಯಕಾರ್ಯ ನಿರ್ವಹಣಾಧಿಕಾರಿಗಳಿಗೆ ಗ್ರಾಮಪಂಚಾಯಿತಿ ಸದಸ್ಯರೆಲ್ಲಾ ಒಗ್ಗೂಡಿ ದೂರು ನೀಡಿದ್ದಾಗ್ಯೂ ಯಾವುದೇ ಬದಲಾವಣೆಯಾಗದೇ ಇರುವುದಕ್ಕೆ ವಿಷಾದ ವ್ಯಕ್ತಪಡಿಸಬೇಕಾಗುತ್ತದೆ ಎಂದು ಪಂಚಾಯಿತಿ ಸದಸ್ಯರು ಆರೋಪಿಸಿದ್ದಾರೆ.ಚಳ್ಳಕೆರೆ ತಾಲ್ಲೂಕು ಪ್ರಮುಖ ಗ್ರಾಮಪಂಚಾಯಿತಿಗಳಲ್ಲಿ ತಳಕು ಗ್ರಾಮಪಂಚಾಯಿತಿಯು ಒಂದಾಗಿದ್ದು, ಈಗಾಗಲೇ ಅಭಿವೃದ್ಧಿ ಕಾರ್ಯಗಳಲ್ಲಿ ಹಿನ್ನೆಡೆ ಉಂಟಾಗಿದ್ದು, ಗ್ರೇಡ್–1 ಕಾರ್ಯದರ್ಶಿಯನ್ನು ಬದಲಾಯಿಸಿ, ಅವರ ಜಾಗಕ್ಕೆ ಸರ್ಕಾರದಿಂದ ನೇಮಿಸಲಾಗುವ ಪಿಡಿಓ ಅವರನ್ನು ನೇಮಕಮಾಡುವಂತೆ ಜಿಲ್ಲಾ ಪಂಚಾಯಿತಿ ಸಿಈಓ ಮತ್ತು ಜಿಲ್ಲಾ ಆಡಳಿತದ ಗಮನಕ್ಕೆ ತಂದಾಗ್ಯೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಗ್ರಾಮಪಂಚಾಯಿತಿಯ ಸದಸ್ಯರು ಆರೋಪಿಸಿದ್ದು, ಈ ತತ್‌ಕ್ಷಣದಿಂದ ತಳಕು ಗ್ರಾಮಪಂಚಾಯಿತಿಗೆ ಖಾಯಂ ಪಿಡಿಓ ಒಬ್ಬರನ್ನು ನೇಮಕಮಾಡುವಂತೆ ಗ್ರಾಮಪಂಚಾಯಿತಿ ಸದಸ್ಯರಾದ ಶಾಂತಕುಮಾರ್, ಕರೀಂ, ಕೆ.ತಿಪ್ಪೇಸ್ವಾಮಿ, ಹೆಚ್.ಮಾರಯ್ಯ, ನೀಲಾಬಾಯಿ, ಸೈಯದ್, ಟಿ.ಕೃಷ್ಣಮೂರ್ತಿ, ಲಕ್ಷ್ಮೀ, ಯು.ಭಾಗ್ಯಮ್ಮ, ಲಕ್ಷ್ಮಮ್ಮ, ವಾಣಿಬಾಯಿ ಮುಂತಾದವರು ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಆಡಳಿತಕ್ಕೆ ಆಗ್ರಹಿಸಿದ್ದಾರೆ.

### ಗೃಹ ಸಚಿವ ಪರಮೇಶ್ವರ್‌ರಿಂದ ತಳಕು ನೂತನ ಠಾಣೆ ಕಟ್ಟಡ ಇಂದು ಲೋಕಾರ್ಪಣೆ




» **ಚಳ್ಳಕೆರೆ**
ಕರ್ನಾಟಕರಾಜ್ಯದಗೃಹಮಂತ್ರಿಡಾ.ಜಿ.ಪರಮೇಶ್ವರ್ ತಮ್ಮ ಅಧಿಕಾರ ವಹಿಸಿಕೊಂಡ ನಂತರ ಇದೇ ಮೊದಲ ಬಾರಿಗೆ ಚಳ್ಳಕೆರೆ ತಾಲ್ಲೂಕಿಗೆ ನ.17ರ ಶುಕ್ರವಾರ ಮಧ್ಯಾಹ್ನ ಆಗಮಿಸುತ್ತಿದ್ದು, ತಾಲ್ಲೂಕಿನ ತಳಕು ಠಾಣಾ ಆವರಣದಲ್ಲಿ ನಿರ್ಮಾಣಗೊಂಡ ನೂತನ ಪೊಲೀಸ್ ಠಾಣಾ ಕಟ್ಟಡವನ್ನು ಉದ್ಘಾಟಿಸುವರು ಎಂದು ಪೊಲೀಸ್ ಮೂಲಗಳು ತಿಳಿಸಿವೆ. ನ.17ರ ಶುಕ್ರವಾರ ಬೆಂಗಳೂರಿನಿಂದ ಚಿತ್ರದುರ್ಗಕ್ಕೆ ಆಗಮಿಸಿ ಚಿತ್ರದುರ್ಗದಲ್ಲೂ ನೂತನವಾಗಿ ನಿರ್ಮಿಸಿರುವ ಪೊಲೀಸ್ ವಸತಿ ಗೃಹ ಹಾಗೂ ನೂತನ ಗ್ರಾಮಾಂತರ ಠಾಣೆಯನ್ನು ಉದ್ಘಾಟಿಸುವರು. ನಂತರ ಮಧ್ಯಾಹ್ನ 01 ಗಂಟೆಗೆ ತಳಕು ಗ್ರಾಮಕ್ಕೆ ಆಗಮಿಸಿ ಅಲ್ಲಿ 2.50 ಕೋಟಿ ವೆಚ್ಚದಲ್ಲಿ ನಿರ್ಮಿಸಿರುವ ನೂತನ ಪೊಲೀಸ್ ಠಾಣಾ ಕಟ್ಟಡವನ್ನು ಉದ್ಘಾಟಿಸುವರು. ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಮೊಳಕಾಲ್ಮೂರು ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ ಸೇರಿದಂತೆ ಹಲವಾರುಮುಖಂಡರು,ಪೊಲೀಸ್‌ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸುವರು.

---

### ಬರ ನಿರ್ವಹಣೆ ಕುರಿತು ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಸೂಚನೆ

# ಕುಡಿವ ನೀರು ಪೂರೈಕೆಗೆ ಆದ್ಯತೆ ನೀಡಬೇಕು

» **ಚಿತ್ರದುರ್ಗ**
ಜಿಲ್ಲೆಯಲ್ಲಿ ಬರ ಪರಿಸ್ಥಿತಿ ಇರುವುದರಿಂದ ಬರುವ ದಿನಗಳಲ್ಲಿ ಕುಡಿಯುವ ನೀರಿಗೆ ತೊಂದರೆ ಉಂಟಾಗಬಹುದಾದ ಸಮಸ್ಯಾತ್ಮಕ ಗ್ರಾಮಗಳನ್ನು ಗುರುತಿಸಿ, ಮುಂದಿನ ಆರು ತಿಂಗಳವರೆಗೆ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸದಂತೆ ಕ್ರಿಯಾ ಯೋಜನೆ ತಯಾರಿಸಿ ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಬರದ ಹಿನ್ನಲೆಯಲ್ಲಿ ಜನ–ಜಾನುವಾರುಗಳಿಗೆ ಕುಡಿಯುವ ನೀರು, ಮೇವು, ಕೃಷಿ ಕೈಗಾರಿಕೆಗಳಿಗೆ ನೀರು, ಬೆಳೆ ಹಾನಿ, ಜನರ ಉದ್ಯೋಗ ಸ್ಥಿತಿ, ಬರ ಪರಿಹಾರ ವಿತರಣೆ ಮುಂತಾದ ಬರ ನಿರ್ವಹಣೆ ಕುರಿತು ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಜನ–ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆಯಾಗದಂತೆ ಗ್ರಾಮ ಪಂಚಾಯಿತಿವಾರು ಪ್ರಸ್ತುತ ಕುಡಿಯುವ ನೀರಿನ ಸಮಸ್ಯೆಯಾತ್ಮಕ ಗ್ರಾಮಗಳು, ಜನವರಿ ಹಾಗೂ ಫೆಬ್ರವರಿ, ಮಾರ್ಚ್–ಏಪ್ರಿಲ್ ಮಾಹೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗ ಬಹುದಾಂತಹ ಗ್ರಾಮಗಳನ್ನು ಗುರುತಿಸಿ, ಮುಂಜಾಗ್ರತಾ ಕ್ರಮವಾಗಿ ಬರ ಪರಿಹಾರ ಕಾರ್ಯಕ್ರಮಗಳನ್ನು ಕೈಗೊಳ್ಳಬೇಕು ಎಂದು ತಾಕೀತು ಮಾಡಿದರು.

ಸದ್ಯಕ್ಕೆ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಇಲ್ಲ. ಮಳೆಯ ಕೊರತೆ ಕಾರಣ ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡು ಬರುವ ಸಾಧ್ಯತೆ ಇರುವುದರಿಂದ ಮುಂಜಾಗ್ರತಾ ಕ್ರಮವಾಗಿ ಯೋಜನೆ ರೂಪಿಸಬೇಕು. ತೀವ್ರ ಸಮಸ್ಯೆ ಉಂಟಾದಾಗ ಸಿದ್ಧತೆ ಮಾಡಿಕೊಳ್ಳಲು ಸಮಯ ವ್ಯರ್ಥ ಮಾಡುವುದು ಸರಿಯಲ್ಲ, ಅದರ ಬದಲಿಗೆ ಮುಂಜಾಗ್ರತಾ ಕ್ರಮವಾಗಿ ಈಗಲೇ ಎಲ್ಲ ಅಗತ್ಯ ಸಿದ್ಧತೆಗಳನ್ನು ಮಾಡಿಟ್ಟುಕೊಳ್ಳಬೇಕು. ಕುಡಿಯುವ ನೀರಿನ ಸಮಸ್ಯೆ ಕಂಡು ಬಂದ ತಕ್ಷಣ ಕೊಳವೆಬಾವಿ ಅವಶ್ಯಕತೆ ಇದ್ದರೆ ತಕ್ಷಣ ಕೊರೆಸಬೇಕು. ಎಲ್ಲೆಲ್ಲಿ ಕೊಳವೆಬಾಯಿ ಕೊರೆಸಬೇಕು ಎಂಬ ಮಾಹಿತಿ ತಹಶೀಲ್ದಾರ್‌ಗಳ ಬಳಿ ಇರಬೇಕು. ಸಮಸ್ಯಾತ್ಮಕ ಗ್ರಾಮಗಳಲ್ಲಿ ಕೊಳವೆ ಬಾವಿ ಕೊರೆಸಲು ಈಗಲೇ ಪಾಯಿಂಟ್ ಮಾಡಿಕೊಳ್ಳಬೇಕು. ಜನಪ್ರತಿನಿಧಿಗಳೊಂದಿಗೆ ಸಮಾಲೋಚಿಸಿ, ಜಲಜೀವನ್ ಮಿಷನ್, ಗ್ರಾಮ ಪಂಚಾಯಿತಿ 15ನೇ ಹಣಕಾಸು ಯೋಜನೆಯಡಿ ಅನುದಾನ ಬಳಸಿಕೊಂಡು ಕೊಳವೆ ಬಾವಿ ಕೊರೆಸಲು ವ್ಯವಸ್ಥೆ ಮಾಡಿಕೊಳ್ಳಬೇಕು. ಜಿಲ್ಲೆಯ ಜನ–ಜಾನುವಾರುಗಳಿಗೆ ನೀರಿನ ಸಮಸ್ಯೆಯಾಗದಂತೆ ಕ್ರಮವಹಿಸಬೇಕು. ಬರ ಹಿನ್ನಲೆಯಲ್ಲಿ ಕುಡಿಯುವ ನೀರಿನ ಪೂರೈಕೆಗೆ ಆದ್ಯತೆ ನೀಡಬೇಕು ಎಂದು ಸೂಚನೆ ನೀಡಿದರು.



ಆರ್.ಓ ಘಟಕ ಸರಿಪಡಿಸಿ: ಜಿಲ್ಲೆಯಲ್ಲಿ ದುರಸ್ಥಿಯಲ್ಲಿರುವ ಎಲ್ಲಾ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸರಿಪಡಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಅವರು ಗ್ರಾಮೀಣ ಕುಡಿಯುವ ನೀರು ಸರಬರಾಜು ಅಧಿಕಾರಿಗಳಿಗೆ, ತಾ.ಪಂ ಇಓ ಹಾಗೂ ಸ್ಥಳೀಯ ಸಂಸ್ಥೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಪ್ರಸ್ತುತ ದಿನಗಳಲ್ಲಿ ಬಹಳಷ್ಟು ಜನರು ಆರ್.ಓ. ಘಟಕದ ನೀರನ್ನು ಬಳಸುತ್ತಿದ್ದಾರೆ. ಆರ್.ಓ. ಘಟಕ ಸರಿಯಾಗಿ ಕಾರ್ಯಾರಂಭ ಮಾಡದಿದ್ದರೆ ಹೇಗೆ? ಸಂಬಂಧಪಟ್ಟ ಏಜೆನ್ಸಿ ಅವರು ಸರಿಯಾಗಿ ನಿರ್ವಹಣೆ ಮಾಡುತ್ತಿಲ್ಲವೇ ಎಂದು ಪ್ರಶ್ನಿಸಿದ ಅವರು, ದುರಸ್ಥಿಯಲ್ಲಿರುವ ಎಲ್ಲಾ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಶೀಘ್ರವೇ ಸರಿಪಡಿಸಬೇಕು ಎಂದು ಹೇಳಿದರು.

15 ದಿನಗಳಿಗೊಮ್ಮೆ ನೀರಿನ ಪರೀಕ್ಷೆ ನಡೆಸಿ: ಪ್ರತಿ 15 ದಿನಗಳಿಗೊಮ್ಮೆ ಕುಡಿಯುವ ನೀರಿನ ಗುಣಮಟ್ಟ ಪರೀಕ್ಷೆಗೆ ಒಳಪಡಿಸಬೇಕು. ನಗರ ಸ್ಥಳೀಯ ಸಂಸ್ಥೆಯ ಅಧಿಕಾರಿಗಳು ನೀರಿನ ಪರೀಕ್ಷೆಯ ವರದಿ ಇಟ್ಟುಕೊಳ್ಳಬೇಕು. ಆರೋಗ್ಯ ಇಲಾಖೆ ವತಿಯಿಂದ ಮೈಕ್ರೋ ಬಯೋಲಾಜಿ ಟೆಸ್ಟ್ ಹಾಗೂ ಗ್ರಾಮೀಣ ಕುಡಿಯುವ ಸರಬರಾಜು ಇಲಾಖೆ ವತಿಯಿಂದ ಕೆಮಿಕಲ್ ಟೆಸ್ಟ್ ಮಾಡಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಮೇವು ಲಭ್ಯತೆ ನಿಖರ ಮಾಹಿತಿ ನೀಡಿ: ಜಿಲ್ಲೆಯಲ್ಲಿ ಮೇವು ಲಭ್ಯತೆಯ ನಿಖರ ಮಾಹಿತಿಯನ್ನು ಪಶುಸಂಗೋಪನೆ ಇಲಾಖೆ ಅಧಿಕಾರಿಗಳು ನೀಡಬೇಕು. ಅಧಿಕಾರಿಗಳು ಕೊಡುವ ವರದಿ ಬಹಳ ಮುಖ್ಯವಾಗಿದ್ದು, ಇದರಿಂದ ಬರ ಪರಿಹಾರ ಕಾರ್ಯಕೈಗೊಳ್ಳಲು ಅನುಕೂಲವಾಗಲಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಸದ್ಯದ ಮೇವಿನ ಸ್ಥಿತಿಗತಿ ಹಾಗೂ ಮುಂದಿನ 90 ದಿನಗಳಿಗೆ ಎಷ್ಟು ಮೇವು ಬೇಕಾಗಬಹುದು ಎಂದು ಮಾಹಿತಿ ನೀಡಬೇಕು ಎಂದು ಪಶುಸಂಗೋಪನೆ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ ಅವರು, ಬೇಡಿಕೆಗನುಗುಣವಾಗಿ ಗೋಶಾಲೆ ತೆರೆಯಲು ಬೇಕಾಗಿರುವ ಜಾಗ, ಕುಡಿಯುವ ನೀರು, ಮೇವು ಸೇರಿದಂತೆ ಅಗತ್ಯ ಮೂಲಸೌಕರ್ಯಕ್ಕೆ ಸಿದ್ಧತೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಜಾಬ್‌ಕಾರ್ಡ್ ಮೇಳ ಆಯೋಜಿಸಿ: ಜಿಲ್ಲೆಯ ಜನರ ವಲಸೆ ತಪ್ಪಿಸುವ ನಿಟ್ಟಿನಲ್ಲಿ ನರೇಗಾದಲ್ಲಿ ಉದ್ಯೋಗ ನೀಡುವುದು ಬಹಳ ಮುಖ್ಯವಾಗಿದ್ದು, ಅರ್ಹ ಫಲಾನುಭವಿಗಳನ್ನು ನೋಂದಣಿ ಮಾಡಿಸಬೇಕು. ಈ ನಿಟ್ಟಿನಲ್ಲಿ ಜಾಬ್‌ಕಾರ್ಡ್ ಮೇಳ ಆಯೋಜಿಸಬೇಕು ಎಂದು ಜಿಲ್ಲಾಕಾರಿಗಳು ತಿಳಿಸಿದರು.

ಚಳ್ಳಕೆರೆ ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ ಜನರು ವಲಸೆ ಹೋಗುತ್ತಿರುವುದು ಗಮನಕ್ಕೆ ಬಂದಿದ್ದು, ವಿಶೇಷವಾಗಿ ಚಳ್ಳಕೆರೆ ಹಾಗೂ ಮೊಳಕಾಲ್ಮುರು ತಾಲ್ಲೂಕಿನ ಜನರನ್ನು ಜಾಬ್‌ಕಾರ್ಡ್‌ಗೆ ನೋಂದಣಿ ಮಾಡಿಸಲು ಹೆಚ್ಚಿನ ಆದ್ಯತೆ ನೀಡಬೇಕು. ಇದರಿಂದ ಜನರು ವಲಸೆ ಹೋಗುವುದು ತಪ್ಪಲಿದೆ. ಈ ಕುರಿತು ಜನರಿಗೆ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಮಂಜುನಾಥ್, ಪಶುಸಂಗೋಪನಾ ಇಲಾಖೆ ಉಪನಿರ್ದೇಶಕ ಡಾ.ಬಾಬುರತ್ನ, ಸೇರಿದಂತೆ ತಹಶೀಲ್ದಾರ್‌ಗಳು, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ನಗರಸ್ಥಳೀಯ ಸಂಸ್ಥೆಯ ಅಧಿಕಾರಿಗಳು, ವಿವಿಧ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

---

### ದೇವರ ಎತ್ತುಗಳ ಹಸಿವುವನ್ನು ನಿವಾರಿಸಲು ನಾಯಕ ಸಮುದಾಯದ ಮುಖಂಡರ ಸಾರ್ಥಕ ಕೆಲಸ

# ಉಚಿತ ಮೇವು ನೀಡಿ ಜಾನುವಾರುಗಳಿಗೆ ಆಸರೆ

» **ಚಳ್ಳಕೆರೆ**
ರಾಜ್ಯದ 223 ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕು ಎಂದು ಘೋಷಿಸಿದ್ದು, ಚಳ್ಳಕೆರೆ ತಾಲ್ಲೂಕು ಸಹ ಬರಗಾಲದ ದುಸ್ಥಿತಿಯಲ್ಲಿದೆ. ಇಂತಹ ಸಂದರ್ಭದಲ್ಲಿ ಈ ಭಾಗದಲ್ಲಿರುವ ದೇವರ ಎತ್ತುಗಳೂ ಸೇರಿದಂತೆ ಹಲವಾರು ಜಾನುವಾರುಗಳಿಗೆ ಪ್ರತಿನಿತ್ಯ ಮೇವಿನ ಕೊರತೆಯಾಗುತ್ತಿದ್ದು, ಇಂತಹ ಸಂದರ್ಭದಲ್ಲಿ ಜಾನುವಾರುಗಳಿಗೆ ಮೇವು ನೀಡಲು ನಿರ್ಧರಿಸಿ ಇಂದು ಒಂದು ಲಕ್ಷದ ಮೌಲ್ಯದ ಮೇವುವನ್ನು ಉಚಿತವಾಗಿ ನನ್ನಿವಾಳ ಮತ್ತು ಅಜ್ಜಯ್ಯನಗುಡಿ ಪ್ರದೇಶದ ದೇವರ ಎತ್ತುಗಳಿಗೆ ನೀಡಲಾಗಿದೆ ಎಂದು ವಾಲ್ಮೀಕಿ ಸಮುದಾಯದ ಹಿರಿಯ ಮುಖಂಡ, ನಾಯಕ ಹಾಸ್ಟಲ್ ಮತ್ತು ವಾಲ್ಮೀಕಿ ಕಲ್ಯಾಣ ಮಂಟಪ ಆಡಳಿತ ಮಂಡಳಿ ಅಧ್ಯಕ್ಷ ಮಲ್ಲಪ್ಪನಾಯಕ ತಿಳಿಸಿದರು.

ಅವರು, ಇಲ್ಲಿನ ಅಜ್ಜಯ್ಯನಗುಡಿ ಪ್ರದೇಶದ ದೇವರ ಎತ್ತುಗಳಿಗೆ ಆಡಳಿತ ಮಂಡಳಿಯ ಸದಸ್ಯರೊಂದಿಗೆ ಮೇವು ನೀಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ದೇವರ ಎತ್ತಗಳ ಉಸ್ತುವಾರಿ ವಹಿಸಿರುವ ಕಿಲಾರಿಗಳು ಸಹ ನಮ್ಮ ಬುಡಕಟ್ಟು ಸಂಸ್ಕೃತಿಯ ಪರಂಪರೆಯನ್ನು ಉಳಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಈ ಹಿನ್ನಲೆಯಲ್ಲಿ ಜಾನುವಾರುಗಳು ಉತ್ತಮವಾಗಿ ಸದೃಢವಾಗಿ ಇರಬೇಕೆಂಬ ದೃಷ್ಟಿಯಿಂದ ಮೇವು ನೀಡಲಾಗುತ್ತಿದೆ. ಅಗತ್ಯ ಕಂಡುಬಂದಲ್ಲಿ ಮತ್ತೊಮ್ಮೆ ಇಲ್ಲಿನ ಪರಸ್ಥಿತಿಯನ್ನು ಅವಲೋಕಿಸಿ ಸಭೆ ಕರೆದು ಮೇವು ನೀಡುವ ಬಗ್ಗೆ ಸೂಕ್ತ ನಿರ್ಧಾರ ಕೈಕೊಳ್ಳಲಾಗುವುದು. ಈ ಕಾರ್ಯದಿಂದ ಎಲ್ಲರಿಗೂ ಸಂತೋಷವಾಗಿದೆಯಲ್ಲದೆ, ಮೂಕಪ್ರಾಣಿಗಳ ಹಸಿವಿನ ವೇದನೆಗೆ ಸ್ಪಂದನೆ ಮಾಡಿದ್ದು, ನಮ್ಮೆಲ್ಲರಿಗೂ ತೃಪ್ತಿ ತಂದಿದೆ ಎಂದರು.



ಕಾರ್ಯದರ್ಶಿ ದುಗ್ಗಾವರ ತಿಪ್ಪೇಸ್ವಾಮಿ ಮಾತನಾಡಿ, ಅಧ್ಯಕ್ಷರ ಮಾರ್ಗದರ್ಶನದಲ್ಲಿ ನಾವೆಲ್ಲರೂ ಸೇರಿ ಚರ್ಚಿಸಿ ಈ ನಿರ್ಧಾರವನ್ನು ಕೈಗೊಂಡಿದ್ದೇವೆ. ಎರಡೂ ಟ್ರಸ್ಟ್‌ಗಳ ವತಿಯಿಂದ ಹಲವಾರು ಸೇವಾ ಕಾರ್ಯಗಳನ್ನು ನಿರಂತರ ಮಾಡಲಾಗುತ್ತಿದೆ. ಮುಂದಿನ ದಿನಗಳಲ್ಲೂ ಇಂತಹ ಸ್ಥಿತಿ ಬಂದರೆ ನಾವು ಸ್ಪಂದನೆಗೆ ಸದಾ ಸಿದ್ದ ಎಂದರು. ಮತ್ತೊರ್ವ ಕಾರ್ಯದರ್ಶಿ ಚನ್ನಂಗಿರಂಗಸ್ವಾಮಿ ಮಾತನಾಡಿ, ದೇವರ ಎತ್ತುಗಳು ಸಹ ನಮ್ಮ ಪರಂಪರೆಯ ಹೆಗ್ಗುರುತಾಗಿ ಉಳಿದಿವೆ. ಇವುಗಳ ಲಾಲನೆ, ಪಾಲನೆ ಕಿಲಾರಿಗಳ ಜವಾಬ್ದಾರಿಯಾದರೂ ನಮ್ಮ ಸಮುದಾಯಕ್ಕೂ ಸಹ ಈ ಬಗ್ಗೆ ಸಾಕಷ್ಟು ಗೌರವವಿದೆ. ದೇವರ ಎತ್ತುಗಳು ಉತ್ತಮ ಆರೋಗ್ಯದಿಂದ ಬದುಕಬೇಕಿದೆ. ಯಾವುದೇ ಕಾರಣಕ್ಕೂ ಅವುಗಳಿಗೆ ಆಹಾರ ಕೊರತೆಯಾಗದಂತೆ ಜಾಗ್ರತೆ ವಹಿಸಬೇಕು ಎಂದರು.

ಟ್ರಸ್ಟ್‌ನ ಸದಸ್ಯರಾದ ಬಾಳೆಮಂಡಿರಾಮದಾಸ್, ಜಿ.ಟಿ.ವೀರಭದ್ರಸ್ವಾಮಿ, ಇಟ್ಟಿಗೆಶ್ರೀನಿವಾಸ್, ಜೆ.ರಘುವೀರನಾಯಕ, ಟಿ.ಮಂಜುನಾಥ, ದೊರೆನಾಗರಾಜು, ಬೋರಯ್ಯ, ಕಿಲಾರಿಗಳಾದ ಪಾಲಯ್ಯ, ಗಾದ್ರಿಪಾಲಯ್ಯ, ಓಬಯ್ಯ ಮುಂತಾದವರು ಉಪಸ್ಥಿತರಿದ್ದರು.

---

### ಅಂಬೇಡ್ಕರ್ ಆಶಯ ಈಡೇರಿಸುವಲ್ಲಿ ಕಾಂಗ್ರೆಸ್ ಮುಂದೆ: ಬಸವರಾಜು



**ಚಳ್ಳಕೆರೆ:** ಚಿತ್ರದುರ್ಗ ಜಿಲ್ಲೆಯೂ ಸೇರಿದಂತೆ ನಾಡಿನ ದಲಿತ ಸಮುದಾಯದ ಶ್ರೇಯೋಭಿವೃದ್ದಿಗಾಗಿ ಕಾಂಗ್ರೆಸ್ ಪಕ್ಷ ಪ್ರಾಮಾಣಿಕ ಸೇವೆ ಮಾಡುತ್ತಾ ಬಂದಿದೆ. ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ ಆಶಯಗಳನ್ನು ಈಡೇರಿಸುವಲ್ಲಿ ಕಾಂಗ್ರೆಸ್ ಪಕ್ಷ ಸಫಲವಾಗಿದೆ. ಸರ್ಕಾರದ ನಾಮನಿರ್ದೇಶನದಲ್ಲೂ ಸಹ ಈ ಸಮುದಾಯಕ್ಕೆ ಹೆಚ್ಚಿನ ಆದ್ಯತೆ ನೀಡಿರುವುದು ಸಂತಸ ತಂದಿದೆ ಎಂದು ಚಿತ್ರದುರ್ಗ ಬ್ಲಾಕ್ ಕಾಂಗ್ರೆಸ್ ಉಪಾಧ್ಯಕ್ಷ ಬಸವರಾಜು ತಿಳಿಸಿದರು. ಅವರು, ಇತ್ತೀಚೆಗೆ ತಾನೇ ಚಿತ್ರದುರ್ಗ ಜಿಲ್ಲಾ ಪಂಚಾಯಿತಿ ಕೆಡಿಪಿ ನಾಮನಿರ್ದೇಶನ ಸದಸ್ಯರಾಗಿ ನೇಮಕಗೊಂಡ ಓ.ರಂಗಸ್ವಾಮಿ(ತಬಲ)ರವರನ್ನು ಪಕ್ಷದ ಪರಿಶಿಷ್ಟ ಜಾತಿ ವಿಭಾಗದ ವತಿಯಿಂದ ಅಭಿನಂದಿಸಿ ಮಾತನಾಡಿದರು. ಪಕ್ಷದ ಸಂಘಟನೆ ಮತ್ತು ಚುನಾವಣೆಯಲ್ಲಿ ಪಕ್ಷದ ಗೆಲುವನ್ನು ಸಾಧಿಸಲು ಓ.ರಂಗಸ್ವಾಮಿ ನಿರಂತರ ಪ್ರಾಮಾಣಿಕ ಪ್ರಯತ್ನ ನಡೆಸುವರು ಎಂಬ ನಂಬಿಕೆ ನನಗಿದೆ ಎಂದರು. ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ಜಿಲ್ಲಾ ಪಂಚಾಯಿತಿ ಕೆಡಿಪಿ ನಾಮನಿರ್ದೇಶನ ಸದಸ್ಯ ಓ.ರಂಗಸ್ವಾಮಿ, ಕಳೆದ ಸುಮಾರು 30 ವರ್ಷಗಳಿಂದ ಪಕ್ಷದ ಸಂಘಟನೆಯಲ್ಲಿ ತೊಡಗಿದ್ದೇನೆ. ಗ್ರಾಮ ಪಂಚಾಯಿತಿ ಸದಸ್ಯನಾಗಿ, ತಾಲ್ಲೂಕು ಪಂಚಾಯಿತಿ ಅಧ್ಯಕ್ಷನಾಗಿ ಕಾರ್ಯನಿರ್ವಹಿಸಿದ್ದೇನೆ. ಪಕ್ಷದ ಸಂಘಟನೆ ಹಾಗೂ ಗೆಲುವಿಗೆ ನಿರಂತರ ಪ್ರಾರ್ಥಿಸುವ ಹಾಗೂ ಕಾರ್ಯರೂಪಕ್ಕೆ ತರುವ ಸಾವಿರಾರು ಕಾರ್ಯಕರ್ತರಲ್ಲಿ ನಾನು ಒಬ್ಬ. ಪಕ್ಷದ ಗೆಲುವೇ ನಮಗೆ ಶಕ್ತಿಯನ್ನು ತುಂಬುತ್ತದೆ ಎಂದರು. ಬಸವರಾಜು, ಕೆಂಚಪ್ಪ, ಸಿ.ಎಚ್.ಮಂಜುನಾಥ, ದೊಡ್ಡಬೀರನಹಳ್ಳಿ ಜಯಣ್ಣ, ನಗರಸಭಾ ಸದಸ್ಯ ಕೆ.ವೀರಭದ್ರಯ್ಯ, ಎಸ್.ಕೆ.ಶ್ರೀನಿವಾಸ್, ಕಿರಣ್‌ಕುಮಾರ್, ಉಮೇಶ್, ಜಗದೀಶ್, ನವೀನ್‌ಚಾಲುಕ್ಯ, ರೇವಣಸಿದ್ದಪ್ಪ, ಉದಯಶಂಕರ್, ಲೋಕೇಶ್, ನಾರಾಯಣಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

---

## ಪ್ರಮುಖ ಸುದ್ದಿ

# ಹೊರಗುತ್ತಿಗೆ ಪೌರಕಾರ್ಮಿಕರ ನೇರಪಾವತಿ ಸೇರಿದಂತೆ ಬೇಡಿಕೆಗಳ ಈಡೇರಿಕೆಗೆ ಉಸ್ತುವಾರಿ ಸಚಿವರಿಗೆ ಮನವಿ

» **ಚಳ್ಳಕೆರೆ**
ಇಲ್ಲಿನ ನಗರಸಭೆಯಲ್ಲಿ ಹೊರಗುತ್ತಿಗೆ ನೌಕರರಾಗಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಪೌರಕಾರ್ಮಿಕರಿಗೆ ನೇರಪಾವತಿ ಸೇರಿದಂತೆ ಎಲ್ಲಾ ಸೌಲಭ್ಯಗಳನ್ನು ನೀಡುವಂತೆ ಒತ್ತಾಯಿಸಿ ಉಸ್ತುವಾರಿ ಸಚಿವ ಡಿ.ಸುಧಾಕರವರಿಗೆ ಮನವಿ ನೀಡಲಾಯಿತು.

ತಾಲ್ಲೂಕು ಪೌರಕಾರ್ಮಿಕರ ಹೊರಗುತ್ತಿಗೆ ನೌಕರರ ಸಂಘದ ಅಧ್ಯಕ್ಷ ಎಸ್.ಶ್ರೀನಿವಾಸ್, ಸಚಿವ ಡಿ.ಸುಧಾಕರ್ ನಿವಾಸಕ್ಕೆ ತೆರಳಿ ಮನವಿ ಅರ್ಪಿಸಿದರಲ್ಲದೆ, ಮನವಿಯಲ್ಲಿರುವ ಎಲ್ಲಾ ಬೇಡಿಕೆಗಳನ್ನು ಈಡೇರಿಸಲು ಸರ್ಕಾರಕ್ಕೆ ಒತ್ತಾಡ ಹೇರಬೇಕು. ಪ್ರಸ್ತುತ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆಯುವ ಸರ್ಕಾರವಾಗಿದೆ, ಚುನಾವಣೆ ಸಂದರ್ಭದಲ್ಲೂ ಸಹ ಹೊರಗುತ್ತಿಗೆ ನೌಕರರನ್ನು ಖಾಯಂ ಮಾಡುವ ಭರವಸೆ ನೀಡಲಾಗಿತ್ತು. ಆದರೆ, ಸರ್ಕಾರ ಬಂದು ಆರು ತಿಂಗಳು ಕಳೆದರೂ ಈ ಬಗ್ಗೆ ಸೂಕ್ತ ನಿರ್ಧಾರ ಕೈಗೊಂಡಿಲ್ಲ, ಆದ್ದರಿಂದ ಕೂಡಲೇ ಹೊರಗುತ್ತಿಗೆ ನೌಕರರಾಗಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ನೇರಪಾವತಿ ಸೇರಿದಂತೆ ಸರ್ಕಾರ ಎಲ್ಲಾ ಯೋಜನೆಗಳ ಸೌಲಭ್ಯವನ್ನು ನೀಡಬೇಕೆಂದು ಮನವಿ ಮಾಡಿದರು.



ಮನವಿ ಸ್ವೀಕರಿಸಿ ಮಾತನಾಡಿದ ಸಚಿವ ಡಿ.ಸುಧಾಕರ, ಹೊರಗುತ್ತಿಗೆ ನೌಕರರ ಸೇವೆ ಖಾಯಂ ಬಗ್ಗೆ ಸರ್ಕಾರ ಶೀಘ್ರದಲ್ಲೇ ಸೂಕ್ತ ನಿರ್ಧಾರ ಕೈಗೊಳ್ಳಲಿದೆ. ರಾಜ್ಯದ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಎಲ್ಲಾ ಸಚಿವರಿಗೂ ಹೊರಗುತ್ತಿಗೆ ನೌಕರರ ಬಗ್ಗೆ ಅನುಕಂಪವಿದ್ದು, ನಾನು ಸಹ ನಿಮ್ಮ ಪರವಾಗಿ ಸರ್ಕಾರ ಮೇಲೆ ಒತ್ತಡ ಹೇರುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷ ಪೆನ್ನೇಶ್, ಕಾರ್ಯದರ್ಶಿ ಬಿ.ಮಂಜುನಾಥ, ಟಿ.ಬಸವ ರಾಜು, ಅಬ್ದುಲ್ ರಶೀದ್, ಸಲ್ಮಾನ್‌ಖಾನ್, ಪಾಲಾಕ್ಷ, ಮಂಜುನಾಥ, ಎಲ್.ಪ್ರಭಾಕರ್, ಪಾಪಣ್ಣ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T